# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 188 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 14–02–2025 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 02 Issue - 188 | RNI No: KARKAN/2023/88462 | KA/SK/CTA-874/2024-2026 | Chitradurga | Date: 14-02-2025 Friday | Page: 4 | Price: Rs. 2-00



ಒಳಪುಟದ ಸುದ್ದಿಗಳು

15ರಂದು ವಸತಿ ಶಾಲೆಗಳ 6ನೇ ತರಗತಿಗೆ ಪ್ರವೇಶ ಪರೀಕ್ಷೆ 2

ಮಾರ್ಚ್ ತಿಂಗಳಲ್ಲಿ ಉದ್ಯೋಗ ಮೇಳ: ಜಿಲ್ಲಾಧಿಕಾರಿ ಟಿ.ವೆಂಕಟೇಶ್ 3

ಕೇಂದ್ರ ಸರಕಾರದಿಂದ ರಾಜ್ಯಕ್ಕೆ ತ್ರೀಡಿ ನೀತಿ: ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಕರ್ತವ್ಯ ಲೋಪ : ನರೇಗಾ ತಾಂತ್ರಿಕ ಸಹಾಯಕ ಕರ್ತವ್ಯದಿಂದ ಬಿಡುಗಡೆ

» ಚಿತ್ರದುರ್ಗ


ಮಹಾತ್ಮಾ ಗಾಂಧಿ ನರೇಗಾ ಯೋಜನೆಯಡಿ ಕಾರ್ಯ ನಿರ್ವಹಿಸುತ್ತಿದ್ದ ತಾಂತ್ರಿಕ ಸಹಾಯಕ ಆರ್.ಸಂಜಯ್ ಅವರನ್ನು ಕರ್ತವ್ಯ ಲೋಪ ಹಿನ್ನಲೆಯಲ್ಲಿ ಕರ್ತವ್ಯದಿಂದ ಬಿಡುಗಡೆಗೊಳಿಸಲಾಗಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ತಿಳಿಸಿದ್ದಾರೆ. ಮೊಳಕಾಲ್ಮೂರು ತಾಲ್ಲೂಕು ತುಮಕೂರ್ಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ, ಪ್ರಸ್ತುತ ಚಳ್ಳಕೆರೆ ತಾಲ್ಲೂಕು ತಾಂತ್ರಿಕ ಸಹಾಯಕ ಆರ್.ಸಂಜಯ್ ಇವರು ತುಮಕೂರ್ಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಚಿಕ್ಕೋಬನಹಳ್ಳಿ ಗ್ರಾಮದ ರಿ.ಸರ್ವೆ ನಂ.27/1ಎ ರ ಜಮೀನಿನಲ್ಲಿ ಪಿಡಿಒ ಮತ್ತು ಜಮೀನು ಮಾಲೀಕರಾದ ಮಂಗಳಮ್ಮ ಕೋಂ ಗುಡ್ಡಪಾಲಯ್ಯ ಅವರ ಹೆಸರಿನಲ್ಲಿರುವ ಜಮೀನಿನಲ್ಲಿ ವಿರುಪಣ್ಣ ನಾಯಕ ಇವರ ಹೆಸರಿನಲ್ಲಿ ವೈಯಕ್ತಿಕಕಾಮಗಾರಿಗಳನ್ನುನಿಯಮಬಾಹಿರವಾಗಿ ಅನುಷ್ಠಾನಗೊಳಿಸಿರುವುದರಿಂದ ಜಿಲ್ಲಾ ಪಂಚಾಯಿತಿ ಓಂಬುಡ್ ಪರ್ಸನ್ ತನಿಖೆ ನಡೆಸಿದ ಸಂದರ್ಭದಲ್ಲಿ ಕಂಡುಬಂದಿದ್ದು, ನರೇಗಾ ಮಾರ್ಗಸೂಚಿ ಉಲ್ಲಂಘಿಸಿ ಕರ್ತವ್ಯ ಲೋಪವೆಸಗಿದ್ದಾರೆ. ನರೇಗಾ ಯೋಜನೆಯ ಮಾರ್ಗಸೂಚಿ ಉಲ್ಲಂಘನೆ ಮಾಡಿರುವುದರಿಂದ ತಾಂತ್ರಿಕ ಸಹಾಯಕ ಆರ್.ಸಂಜಯ್ ಅವರ ಸೇವೆಯುಇಲಾಖೆಗೆಅವಶ್ಯಕತೆಇಲ್ಲದಿರುವುದರಿಂದ ಕರ್ತವ್ಯದಿಂದ ಬಿಡುಗಡೆಗೊಳಿಸಲಾಗಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ತಿಳಿಸಿದ್ದಾರೆ.

### ಜೆ.ಬಿ.ಹಳ್ಳಿ ಪಿಡಿಒ ಸೇವೆಯಿಂದ ಅಮಾನತು

» ಚಿತ್ರದುರ್ಗ

ಮೊಳಕಾಲ್ಮೂರು ತಾಲ್ಲೂಕು ಜೆ.ಬಿ. ಹಳ್ಳಿ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹೆಚ್.ಸುರೇಶ್ ಅವರನ್ನು ಕರ್ತವ್ಯ ಲೋಪದ ಹಿನ್ನಲೆಯಲ್ಲಿ ಇಲಾಖಾ ವಿಚಾರಣೆ ಕಾಯ್ದಿರಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಸೇವೆಯಿಂದ ಅಮಾನತುಗೊಳಿಸಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಶಿಸ್ತು ಪ್ರಾಧಿಕಾರಿ ಎಸ್.ಜೆ.ಸೋಮಶೇಖರ್ ಆದೇಶಿಸಿದ್ದಾರೆ. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹೆಚ್.ಸುರೇಶ್ ಅವರು ನಿಯುಕ್ತಿಗೊಳಿಸಿದ ಸ್ಥಳಕ್ಕೆ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದೆ, ಒಬ್ಬ ಜವಾಬ್ದಾರಿಯುತ, ಸರ್ಕಾರಿ ನೌಕರರಾಗಿದ್ದುಕೊಂಡು, ಸರ್ಕಾರದ ಮತ್ತು ಮೇಲಾಧಿಕಾರಿಗಳ ಆದೇಶಗಳನ್ನು ಉಲ್ಲಂಘನೆ ಮಾಡುವ ಮೂಲಕ ಸರ್ಕಾರಿ ನೌಕರರ ವೃತ್ತಿಗೆ ತರವಲ್ಲದ ರೀತಿ ವರ್ತಿಸಿ, ನಿಯಮಗಳನ್ನು ಉಲ್ಲಂಘಿಸಿರುವುದು ಕಂಡು ಬಂದ ಕಾರಣ ಅವರನ್ನು ಅಮಾನತುಗೊಳಿಸಿ ಆದೇಶಿಸಲಾಗಿದೆ. ಅಮಾನತು ಅವಧಿಯಲ್ಲಿ ಪ್ರಾಧಿಕಾರದ ಅನುಮತಿ ಪಡೆಯದೆ ಕೇಂದ್ರ ಸ್ಥಾನ ಬಿಡುವಂತಿಲ್ಲ ಮತ್ತು ಅನ್ಯ ಉದ್ಯೋಗದಲ್ಲಿ ತೊಡಗುವಂತಿಲ್ಲ ಹಾಗೂ ನಿಯಮಾನುಸಾರ ಜೀವನಾಧಾರ ಭತ್ಯೆಗೆ ಅರ್ಹರಿರುತ್ತಾರೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಆದೇಶದಲ್ಲಿ ತಿಳಿಸಿದ್ದಾರೆ.

### ಫೆ. 17 ರಿಂದ ವಾಹನ ಸಂಚಾರ ಗಣತಿ




» ಚಿತ್ರದುರ್ಗ

ಲೋಕೋಪಯೋಗಿ ಇಲಾಖೆ ವತಿಯಿಂದ ಚಿತ್ರದುರ್ಗ ವಿಭಾಗ ವ್ಯಾಪ್ತಿಯಲ್ಲಿ 2025 ನೇ ಸಾಲಿನ ವಾಹನ ಸಂಚಾರ ಗಣತಿ ಕಾರ್ಯವನ್ನು ಫೆ. 17 ರಂದು ಬೆಳಿಗ್ಗೆ 06 ಗಂಟೆಯಿಂದ ಫೆ. 24 ರ ಬೆಳಿಗ್ಗೆ 06 ಗಂಟೆಯವರೆಗೆ ಒಟ್ಟು 07 ದಿನಗಳ ಕಾಲ ಹಮ್ಮಿಕೊಳ್ಳಲಾಗಿದೆ. ಚಿತ್ರದುರ್ಗ ವಿಭಾಗ ವ್ಯಾಪ್ತಿಯಲ್ಲಿ ಫೆ. 17 ರಿಂದ ಏಳು ದಿನಗಳ ಕಾಲ ನಡೆಯಲಿರುವ ವಾಹನ ಸಂಚಾರ ಗಣತಿ ಕಾರ್ಯ ಸುಗಮವಾಗಿ ನಡೆಸಲು ವಾಹನ ಚಾಲಕರು ಹಾಗೂ ಸಾರ್ವಜನಿಕರು ಗಣತಿ ಜರುಗುವ ಪ್ರದೇಶಗಳಲ್ಲಿ ವಾಹನಗಳನ್ನು ನಿಧಾನವಾಗಿ ಚಲಿಸಿ, ಸಹಕಾರ ನೀಡಬೇಕು ಎಂದು ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಇಂಜಿನಿಯರ್ ಕೋರಿದ್ದಾರೆ.

---

### ಪತ್ರಿಕಾಗೋಷ್ಠಿಯಲ್ಲಿ ತೋಟಗಾರಿಕೆ ಉಪನಿರ್ದೇಶಕಿ ಜಿ.ಸವಿತಾ ಮಾಹಿತಿ

## ಹೆಣ್ಣಿಗೆ ಗೌರವ ಸೂಚಕ ಕಲಾಕೃತಿ, ಮಯೂರವರ್ಮ, ಸ್ವಾವಲಂಬಿ ರೈತ ಹಾಗೂ ವಾಣಿವಿಲಾಸ ಸಾಗರ ಕಲಾಕೃತಿ ಫಲ–ಪುಷ್ಪ ಪ್ರದರ್ಶನದ ವಿಶೇಷ ಆಕರ್ಷಣೆ

# ಫೆ.15ರಿಂದ ಫಲ–ಪುಷ್ಪ ಪ್ರದರ್ಶನ







» ಚಿತ್ರದುರ್ಗ

ಚಿತ್ರದುರ್ಗ ನಗರದ ವಿ.ಪಿ. ಬಡಾವಣೆಯಲ್ಲಿರುವ ಜಿಲ್ಲಾ ತೋಟಗಾರಿಕೆ ಇಲಾಖೆ ಆವರಣದಲ್ಲಿ ಇದೇ ಫೆ.15 ರಿಂದ 17 ರವರೆಗೆ ಫಲ–ಪುಷ್ಪ ಪ್ರದರ್ಶನ ಏರ್ಪಡಿಸಲಾಗಿದೆ. ಹೆಣ್ಣಿಗೆ ಗೌರವ ಸೂಚಕ ಕಲಾಕೃತಿ, ಮಯೂರವರ್ಮ, ಸ್ವಾವಲಂಬಿ ರೈತ ಹಾಗೂ ವಾಣಿವಿಲಾಸ ಸಾಗರ ಕಲಾಕೃತಿ 32ನೇ ಫಲ–ಪುಷ್ಪ ಪ್ರದರ್ಶನದ ಈ ಬಾರಿಯ ವಿಶೇಷ ಆಕರ್ಷಣೆ ಎಂದು ತೋಟಗಾರಿಕೆ ಉಪನಿರ್ದೇಶಕಿ ಜಿ.ಸವಿತಾ ಹೇಳಿದರು.

ಜಿಲ್ಲಾ ಫಲ–ಪುಷ್ಪ ಪ್ರದರ್ಶನವನ್ನು ಪ್ರತಿ ವರ್ಷವೂ ಆಚರಿಸುತ್ತಿದ್ದು, ವಿವಿಧ ಜಾತಿಯ ಹೂಗಳು, ಹಣ್ಣುಗಳು, ತರಕಾರಿಗಳು, ಮತ್ತು ಹಲವು ವಿಶೇಷ ಬಗೆಯ ಅಲಂಕಾರಿಕಾ ಗಿಡಗಳನ್ನು ಬೆಳೆಸಿ ಪ್ರದರ್ಶಿಸಲಾಗುತ್ತಿದೆ. ಫಲ–ಪುಷ್ಪ ಪ್ರದರ್ಶನದಲ್ಲಿ ಹೂವಿನ ಗಿಡಗಳ ಬೃಹತ್ ಪ್ರದರ್ಶನ, ಕುಬ್ಜ ಮರ (ಬೋನ್ಸಾಯ್) ಗಿಡಗಳು, ತರಕಾರಿ ಕೆತ್ತನೆ, ಅಲಂಕಾರಿಕಾ ಗಿಡಗಳ ಜೋಡಣೆ ಹಾಗೂ ಜಿಲ್ಲೆಯ ರೈತರು ಬೆಳೆದಿರುವ ಹಣ್ಣು ಮತ್ತು ತರಕಾರಿಗಳ ಪ್ರದರ್ಶನ ಏರ್ಪಡಿಸಿ, ವಿವಿಧ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ಪತ್ರಿಕಾಗೋಷ್ಠಿಯಲ್ಲಿ ಅವರು ಮಾಹಿತಿ ನೀಡಿದರು.

ಬಿಸಿಲು ನಾಡಿನಲ್ಲಿ ಪುಷ್ಪಗಳ ಕಾರುಬಾರು: ವಿವಿಧ ಪುಷ್ಪ ಜೋಡಣೆಗಳಿಗೆ ಹಲವು ಬಗೆಯ ವಿಶೇಷ ಹೂಗಳನ್ನು ಬಳಸುತ್ತಿರುವುದರ ಜೊತೆಗೆ ಕುಂಡದಲ್ಲಿ ಬೆಳೆದ ಚಿತ್ತಾಕರ್ಷಕ ವರ್ಣಗಳಿಂದ ಕೂಡಿದ ಸುಮಾರು 50ಕ್ಕೂ ಹೆಚ್ಚು ಬಗೆಯ 50 ಸಾವಿರ ವಿವಿಧ ಜಾತಿಯ ಹೂವಿನಗಿಡಗಳನ್ನು ಬೆಳೆಯಲಾಗಿದೆ.

ಆರ್ಕಿಡ್ಸ್, ಕಾಕ್ಸ್ ಕೂಂಬ್, ಸೆಲೋಶಿಯಾ, ಗಾಕ್ಸೀನಿಯ, ಕೆಲಂಚಾ, ಲಿಲ್ಲಿಸ್, ಇಂಪೇಷನ್ಸ್ (ಮಿಕ್ಸ್‌ಡ್), ಡಾಲಿಯಾ (ಡ್ವಾರ್ಫ್ ಮತ್ತು ಟಾಲ್) ಸಾಲ್ವಿಯಾ (ಕೆಂಪು, ನೀಲಿ, ಕೇಸರಿ,) ಚೆಂಡು ಹೂ, ಚಿಂತಾಮಣಿ ಚೆಂಡು ಹೂ, ಜಿನಿಯಾ (ಡ್ವಾರ್ಫ್ ಮತ್ತು ಟಾಲ್), ಪೆಟೂನಿಯಾ (ಸಿಂಗಲ್ ಮತ್ತು ಡಬಲ್ ವರ್ಲ್), ಕಾಸ್‌ಮಾಸ್ ಮಿಕ್ಸ್ (ಡ್ವಾರ್ಫ್ ಮತ್ತು ಟಾಲ್), ಬಾಲ್ಸಂ, ಜೆರೇನಿಯಂ, ಆಂಟಿರಿನಮ್ ಮಿಕ್ಸ್,ಡಯಾಂತಸ್ ಮಿಕ್ಸ್, ಕ್ಯಾಲೊಂಡೋಲಾ, ಪಾಟ್ ಕ್ರೈಸಾಂತೆಮ್, ಪೆಂಟಾಸ್, ಯುಪೋರ್ಬಿಯ ಮಿಲ್ಲಿ, ಫಾಯಿನ್‌ಸಿಟಿಯಾ, ಬಿಗೋನಿಯಾ, ವಿಂಕಾ, ಇತ್ಯಾದಿ ವಿವಿಧ ಪುಷ್ಪ ಸಸಿಗಳು, ನೂರಕ್ಕೂ ಹೆಚ್ಚು ಬಗೆಯ ತಳಿಗಳು, ಪ್ರದರ್ಶಿಸುವುದರೊಂದಿಗೆ ಪುಷ್ಪ ರಸಿಕರಿಗೆ ಪ್ರದರ್ಶನ ಮುದ ನೀಡಲಿದೆ ಎಂದು ಹೇಳಿದರು.







ಹೆಣ್ಣಿಗೆ ಗೌರವಸೂಚಕ ಕಲಾಕೃತಿ: ನಾವು ನಮ್ಮ ನಿತ್ಯ ಜೀವನದಲ್ಲಿ ಹೆಣ್ಣಿಗೆ ಗೌರವಯುತ ಸ್ಥಾನ ನೀಡಿದ್ದು, ನಮ್ಮ ನಿಸರ್ಗವನ್ನು ಪ್ರಕೃತಿ ಮಾತೆ ಎಂದು, ಭೂಮಿಯನ್ನು ಭೂತಾಯಿ ಎಂದು, ಗಂಗೆಯನ್ನು ಗಂಗಾಮಾತೆ ಎಂದು, ನಮ್ಮ ದೇಶವನ್ನು ಭಾರತಮಾತೆ ಎಂದು ಹಾಗೂ ನಮ್ಮ ರಾಜ್ಯವನ್ನು ಕನ್ನಡದ ಭುವನೇಶ್ವರಿಯ ಸ್ವರೂಪದಲ್ಲಿ ಪೂಜಿಸುತ್ತಾ ಬಂದಿದ್ದೇವೆ. ನಮ್ಮ ಹುಟ್ಟಿನಿಂದ ಸಾವಿನವರೆಗೂ ಹೆಣ್ಣು ತಾಯಿಯಾಗಿ, ಸತಿಯಾಗಿ,ಸೋದರಿಯಾಗಿ,ಪುತ್ರಿಯಾಗಿ, ಸೊಸೆಯಾಗಿ ಹೀಗೆ ಸಂಸಾರದ ಕಡಲಿನಲ್ಲಿ ವಿವಿಧ ಸ್ವರೂಪಗಳಲ್ಲಿ ಸ್ಪಂದಿಸುತ್ತಾ ಬಂದಿದ್ದಾಳೆ. ಹೆಣ್ಣಿಗೆ ಇಷ್ಟೆಲ್ಲಾ ಸ್ಥಾನಮಾನ ನೀಡಿದ್ದರೂ ಪ್ರಸ್ತುತ ಸಮಾಜದಲ್ಲಿ ಹೆಣ್ಣು ವಿವಿಧ ರೀತಿಯಲ್ಲಿ ಶೋಷಣೆಗೆ ಒಳಗಾಗುತ್ತಿರುವುದನ್ನು ನೋಡಬಹುದು. ಹೆಣ್ಣಿನ ಮೇಲಿನ ಅತ್ಯಾಚಾರ, ಭ್ರೂಣಹತ್ಯೆ, ವರದಕ್ಷಿಣೆ ಕಿರುಕುಳ, ಪೋಕ್ಸೋ ಪ್ರಕರಣಗಳು ಇತ್ಯಾದಿಯಾಗಿ ಶೋಷಣೆಗೆ ಒಳಗಾಗುತ್ತಿದ್ದಾಳೆ. ಈ ಎಲ್ಲಾ ವಿದ್ಯಮಾನ ಗಮನದಲ್ಲಿಟ್ಟುಕೊಂಡು ಹೆಣ್ಣನ್ನು ಕೇವಲ ಒಬ್ಬ ಹೆಣ್ಣಾಗಿ, ಅಬಲೆಯಾಗಿ ನೋಡದೆ, ಸಬಲೆಯಾಗಿ ನೋಡಲಿ ಎಂಬ ಮಹಾತ್ವಾಕಾಂಕ್ಷೆಯೊಂದಿಗೆ ಹಾಗೂ ಹೆಣ್ತನಕ್ಕೆ ಘಾಸಿಯಾಗದಂತೆ ಗೌರವಿಸೋಣ ಎಂಬ ಅರ್ಥದ ಕಲಾಕೃತಿ ಪ್ರದರ್ಶಿಸಲಾಗುವುದು ಎಂದರು.

ಮಯೂರವರ್ಮ: ಅ ಚಿತ್ರದುರ್ಗದ ಚಂದ್ರವಳ್ಳಿಯಲ್ಲಿ ಕನ್ನಡದ ಮೊದಲ ದೊರೆ ಮಯೂರವರ್ಮ ಕನ್ನಡದ ಮೊದಲ ಸಾಮ್ರಾಜ್ಯ ಸ್ಥಾಪಿಸಿರುವುದು ಹೆಮ್ಮೆಯ ವಿಷಯವಾಗಿದ್ದು, ಅನೇಕರಿಗೆ ಈ ಮಾಹಿತಿಯು ತಿಳಿದಿರುವುದಿಲ್ಲ. ಪಲ್ಲವರಿಂದ ಅವಮಾನಿತನಾದ ಮಯೂರವರ್ಮ ಹಿಂದಿರುಗಿ ಚಂದ್ರವಳ್ಳಿಯ ಘನ ಕಾಡಿನಲ್ಲಿ ಅಂದಿನ ಶ್ರೀ ಪರ್ವತ ಇಂದಿನ ದವಳಪ್ಪನಗುಡ್ಡ ಸುತ್ತ ಮುತ್ತ ಇಲ್ಲಿನ ಜನರನ್ನು ಒಳಗೊಂಡು ಶಸ್ತ್ರಭ್ಯಾಸ ಮಾಡಿ ಉನ್ನತ ಸೈನ್ಯ ಕಟ್ಟಿ ಪಲ್ಲವರೊಡನೆ ಕೆಚ್ಚದೆಯಿಂದ ಹೋರಾಡಿ ಅವರನ್ನು ಸೋಲಿಸಿ ಕನ್ನಡದ ಪ್ರಥಮ ಸಾಮ್ರಾಜ್ಯ ಚಂದ್ರವಳ್ಳಿಯಲ್ಲಿ ಸ್ಥಾಪನೆ ಮಾಡಿರುವುದು ಕನ್ನಡಿಗರಾದ ನಮಗೆ ಅದರಲ್ಲೂ ಚಿತ್ರದುರ್ಗರವರಾದ ನಮಗೆ ಅತ್ಯಂತ ಹೆಮ್ಮೆ ಪಡುವಂತ ವಿಷಯವಾಗಿದೆ. ಇದಕ್ಕೆ ಪೂರಕವಾಗಿ ಚಂದ್ರವಳ್ಳಿಯ ಹುಲೆಗುಂದಿ ದೇವಸ್ಥಾನದ ಹತ್ತಿರ ಇರುವ ಕಲ್ಲಿನ ಮೇಲೆ ಮಯೂರವರ್ಮನ ಶಾಸನ ಇರುವುದು ಎಷ್ಟೋ ಜನಗಳಿಗೆ ತಿಳಿದಿರುವುದಿಲ್ಲ. ಚಂದ್ರವಳ್ಳಿ ಕೆರೆ ಬಲಪಡಿಸಿ ನಿರ್ವಹಣೆ ಮಾಡಿರುವುದು, ಚಂದ್ರವಳ್ಳಿ ಗುಹೆಯ ನಿರ್ವಹಣೆ ಆ ಕಾಲಘಟದಲ್ಲೇ ಆಗಿರುತ್ತದೆ. ನಮ್ಮ ಈ ಇತಿಹಾಸ ಹೇಳುವ ಮಯೂರವರ್ಮನ ಕಲಾಕೃತಿ, ಚಂದ್ರವಳ್ಳಿ ಕೆರೆ, ದವಳಪ್ಪನಗುಡ್ಡ ಹಾಗೂ ಕಲ್ಲಿನ ಮೇಲೆ ಇರುವ ಶಾಸನ ಪರಿಚಯಿಸುವಂತೆ ಪ್ರದರ್ಶನಗೊಳಿಸಲಾಗುವುದು ಎಂದು ಹೇಳಿದರು.

ಸ್ವಾವಲಂಬಿ ರೈತ: ಪ್ರಸ್ತುತ ನಮ್ಮ ರೈತರು ಬೀಜಗಳಿಗೆ, ಗೊಬ್ಬರಗಳು, ಉಳುಮೆ ಮಾಡಲು ಇತ್ಯಾದಿ ಎಲ್ಲಾ ಕೆಲಸಗಳಿಗೂ ಬೇರೆಯವರ ಮೇಲೆ ಅವಲಂಬನೆಯಾಗಿರುವುದು ಹಾಗೂ ಖರ್ಚುವೆಚ್ಚಗಳು ಹೆಚ್ಚಾಗಿ ಮಾಡುತ್ತಿರುವುದು ಕಂಡುಬರುತ್ತಿದೆ. ಆದರೆ ಹಿಂದಿನ ಕಾಲದ ನಮ್ಮ ರೈತ ತನ್ನದೇ ಆದ ಬೀಜ, ತನ್ನದೇ ಗೊಬ್ಬರ, ಹಸು ಕರುಗಳೊಂದಿಗೆ ಎಲ್ಲಾ ಕೆಲಸಗಳನ್ನು ಸ್ವಂತ ಮಾಡಿ ಬೀಜ ಗೊಬ್ಬರ ಇತ್ಯಾದಿಗಳಿಗೆ ಯಾರನ್ನೂ ಬೇಡದೇ ಸ್ವಾವಲಂಭಿಯಾಗಿ ಅತ್ಯುತ್ತಮ ಕೃಷಿ ಮಾಡುತ್ತಿದ್ದರು, ಅಲ್ಲದೇ ಸುತ್ತಾ ಮುತ್ತಾ ಇರುವ ನಿಸರ್ಗದೊಂದಿಗೆ ಪ್ರಾಣಿ ಪಕ್ಷಿಗಳೊಂದಿಗೆ ಸಹಬಾಳ್ವೆಯಿಂದ ಬದುಕುತ್ತಿದ್ದರು. ಅಂತಹ ಸ್ವಾವಲಂಬಿ ರೈತ ವಿವಿಧ ಗಿಡಗಳ ತೋಟ ಎರೆಹುಳು ಗೊಬ್ಬರ ಘಟಕ, ಜೀವಸಾರ ಘಟಕ, ಗೊಬರ್ ಗ್ಯಾಸ್ ಉತ್ಪಾದನೆ, ಕೃಷಿಹೊಂಡ, ಮಳೆ ನೀರು ಕೊಯ್ಲು ಘಟಕ, ತನ್ನದೇ ಎತ್ತುಗಳಿಂದ ಉಳುಮೆ ಮಾಡುವುದು ಇತ್ಯಾದಿ ಕೆಲಸ ನಿರ್ವಹಿಸಿ ಸ್ವಾವಲಂಬಿಯಾಗಿ ಬದುಕುತ್ತಿರುವ ರೈತನ ಪರಿಚಯಿಸುವಂತೆ ಪ್ರದರ್ಶನಗೊಳಿಸಲಾಗುವುದು ಎಂದರು.

ವಾಣಿವಿಲಾಸ ಸಾಗರ: ಮಾರಿಕಣಿವೆ ಎಂದು ಜನಪ್ರಿಯವಾಗಿ ಕರೆಯುವ ವಾಣಿವಿಲಾಸ ಸಾಗರ ಕರ್ನಾಟಕದ ಹಳೇಯ ಆಣಿಕಟ್ಟುಗಳಲ್ಲಿ ಒಂದಾಗಿದ್ದು, ನಮ್ಮ ಚಿತ್ರದುರ್ಗ ಜಿಲ್ಲೆಯಲ್ಲಿ ಹರಿಯುವ ವೇದಾವತಿ ನದಿಗೆ ಅಡ್ಡಲಾಗಿ ಹಿರಿಯೂರಿನ ಮಾರಿಕಣಿವೆಯಲ್ಲಿ ಕಟ್ಟಲಾಗಿದ್ದು, ಈ ಡ್ಯಾಂನ ಜಲಾನಯನ ಪ್ರದೇಶವು ಸುಮಾರು 10 ಸಾವಿರ ಹೆಕ್ಟರ್‌ಗೂ ಅಧಿಕವಿದ್ದು, ಚಿತ್ರದುರ್ಗ ಹಾಗೂ ಹಿರಿಯೂರು ನಗರಗಳಿಗೆ ಕುಡಿಯುವ ನೀರನ್ನು ಒದಗಿಸುತ್ತಿದೆ. 20ನೇ ಶತಮಾನದ ಆರಂಭದಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಚಿತ್ರದುರ್ಗ ಜನತೆಗೆ ಕೊಡುಗೆಯಾಗಿ ನೀಡಿದ್ದರು. ಯಾವುದೇ ಸಿಮೆಂಟ್ ಉಪಯೋಗಿಸದೆ ಕೇವಲ ಗಾರೆಯಿಂದಲೇ ಇದನ್ನು ಕಟ್ಟಲಾಗಿದ್ದು, ಅಣೆಕಟ್ಟಿನ ಉತ್ತರದ ಬದಿಯಿಂದ ನೋಡಿದಾಗ ಭಾರತದ ಭೂ ಪಟವನ್ನು ನಾವು ಕಾಣಬಹುದು. ಪ್ರಸ್ತುತ ಡ್ಯಾಂ ಭರ್ತಿಯಾಗಿದ್ದು, ಇತ್ತೀಚಿಗೆ ಮುಖ್ಯಮಂತ್ರಿಗಳು ಬಾಗಿನ ಅರ್ಪಣೆ ಮಾಡಿದ್ದು, ತುಂಬಿದ ಡ್ಯಾಂ ಅನ್ನು ಸಂಭ್ರಮಿಸುವ ಸೂಚಕವಾಗಿ ವಾಣಿ ವಿಲಾಸ ಸಾಗರ ಅಣೆಕಟ್ಟಿನ ಕಲಾಕೃತಿ ಪ್ರದರ್ಶಿಸಲಾಗುವುದು ಎಂದು ತಿಳಿಸಿದರು.ಪ್ರಸ್ತುತ ಜೀವನದಲ್ಲಿ ಗೆಡ್ಡೆ ಗೆಣಸುಗಳ ಮಹತ್ವದ ಅರಿವು ಮೂಡಿಸಲು ಹಾಗೂ ರೈತರಿಗೆ ಆದಾಯದ ದೃಷ್ಟಿಯಿಂದ ಮಹತ್ವದ ಬೆಳೆಗಳಾಗಿರುವ ವಿವಿಧ ಜಾತಿಯ ಗೆಡ್ಡೆ ಗೆಣಸುಗಳ ಕಂದಮೂಲಗಳ ಪರಿಚಯ ಹಾಗೂ ಮಾಹಿತಿ ನೀಡಲಾಗುವುದು. ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಹೆಣ್ಣುಮಕ್ಕಳನ್ನು ತರಕಾರಿ ಕೆತ್ತನೆಯಲ್ಲಿ ಪ್ರದರ್ಶಿಸಲಾಗುವುದು. ತೆಂಗಿನ ಚಿಪ್ಪಿನಲ್ಲಿ ವಿವಿಧ ರೀತಿಯ ಕಲಾಕೃತಿಗಳನ್ನು ಕೆತ್ತನೆ ಮಾಡಿದ ಪ್ರದರ್ಶಿಕೆಗಳನ್ನು ಪ್ರದರ್ಶಿಸಲಾಗುವುದು ಹಾಗೂ ಜಿಲ್ಲೆಯ ರೈತರು ಬೆಳೆದಿರುವ ತೋಟಗಾರಿಕೆ ಉತ್ಪನ್ನಗಳ ಪ್ರದರ್ಶನ ಹಾಗೂ ಚಿತ್ರದುರ್ಗದ ಖ್ಯಾತ ಚಿತ್ರಕಲಾವಿದರಿಂದ ಅಕ್ರಾಲಿಕ್, ಜಲವರ್ಣ ಹಾಗೂ ಆಯಿಲ್ ಮಾಧ್ಯಮದ ಚಿತ್ರಕಲಾಕೃತಿಗಳು ಪ್ರದರ್ಶನಗೊಳ್ಳಲಿವೆ. ಚಿತ್ರಕಲಾವಿದರಾದ ದಾದಾ ಚಿತ್ರದುರ್ಗ, ನಾಗರಾಜ್ ಬೇದ್ರೆ, ಜವಳಿ ಶಾಂತಕುಮಾರ್, ನವೀನ್ ಅವರು ರಚಿಸಿದ ಕಲಾಕೃತಿಗಳನ್ನ ಪ್ರದರ್ಶಿಸಲಾಗುತ್ತದೆ ಎಂದು ಹೇಳಿದರು.

ನೀರು ಹರಿಯುವಂತೆ ಇರುವ ಜಲಪಾತಗಳು, ವಿವಿಧ ತರಹದ ಬೋನ್ಸಾಯ್ ಗಿಡಗಳ ಪ್ರದರ್ಶನ, ಮಕ್ಕಳ ಆಕರ್ಷಣೆಗಾಗಿ ಫಲ ಪುಷ್ಪ ಪ್ರದರ್ಶನದಲ್ಲಿ ಡೈನೋಸಾರಸ್‌ನ ಕಲಾಕೃತಿಯನ್ನು ಪ್ರದರ್ಶಿಸಲಾಗುವುದು ಜೊತೆಗೆ ಜಿಲ್ಲೆಯ ವಿವಿಧ ಇಲಾಖೆಗಳಿಂದ ತಮ್ಮ ಇಲಾಖೆ ಯೋಜನೆಗಳ ಬಗ್ಗೆ ಮಾಹಿತಿ ನೀಡುವುದರಿಂದ ಒಂದೇ ಸೂರಿನಡಿ ಎಲ್ಲಾ ಇಲಾಖೆಗಳಲ್ಲಿ ಸಿಗುವ ಸೌಲಭ್ಯಗಳ ಮಾಹಿತಿ ರೈತರಿಗೆ ಹಾಗೂ ಆಸಕ್ತ ಸಾರ್ವಜನಿಕರಿಗೆ ದೊರೆಯುತ್ತದೆ ಎಂದರು.

ವಿವಿಧ ಸ್ಪರ್ಧೆಗಳ ಆಯೋಜನೆ: ಫಲಪುಷ್ಪ ಪ್ರದರ್ಶನದ ಅಂಗವಾಗಿ ನಗರದ ವಿವಿಧ ಶಾಲೆಗಳ ಶಾಲಾ ಮಕ್ಕಳಿಗೆ ಜಾನಪದ ಹಾಗೂ ಭಾವಗೀತೆ ಸ್ಪರ್ಧೆ, ಚಿತ್ರಕಲಾ ಸ್ಪರ್ಧೆ, ಪ್ರಬಂಧ ಸ್ಪರ್ಧೆ, ಹಣ್ಣು ಮತ್ತು ಹೂ ತರಕಾರಿಗಳನ್ನು ಬಳಸಿ ಪ್ಯಾನ್ಸಿ ಡ್ರೆಸ್ ಸ್ಪರ್ಧೆ, ಚಿಕ್ಕ ಮಕ್ಕಳಿಗೆ ಹಣ್ಣು ಮತ್ತು ತರಕಾರಿಗಳ ಗುರುತಿಸುವ ಸ್ಪರ್ಧೆಗಳನ್ನು ಏರ್ಪಡಿಸಲಾಗುವುದು ಎಂದು ಜಿಲ್ಲಾ ತೋಟಗಾರಿಕೆ ಸಂಘದ ಪದನಿಮಿತ್ತ ಕಾರ್ಯದರ್ಶಿ ಹಾಗೂ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕಿ ದೀಪಾ ಭೀಮಪ್ಪ ಹೊಂಕಳಿ ತಿಳಿಸಿದರು.

ಸಾರ್ವನಿಕರಿಗೆ ರಂಗೋಲಿ ಸ್ಪರ್ಧೆ, ಮನೆಯ ಆವರಣದಲ್ಲಿ ವಿವಿಧ ಜಾತಿಯ ಅಲಂಕಾರಿಕ ಕುಂಡಗಳ ಜೋಡಣೆ ಮತ್ತು ಮನೆ, ಸಂಸ್ಥೆಗಳ ಆವರಣದಲ್ಲಿ ಉದ್ಯಾನವನಗಳನ್ನು ನಿರ್ಮಿಸಿದವರಿಗೆ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗಿದೆ. ಈ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಸಮಾರೋಪದ ಸಮಾರಂಭದಲ್ಲಿ ಬಹುಮಾನಗಳನ್ನು ನೀಡಲಾಗುವುದು ಎಂದರು.ಜಿಲ್ಲಾ ತೋಟಗಾರಿಕೆ ಸಂಘದ ಸಲಹಾ ಸಮಿತಿ ಅಧ್ಯಕ್ಷ ಜಿ.ಎಸ್.ಉಜ್ಜಿನಪ್ಪ ಮಾತನಾಡಿ, ಜಿಲ್ಲೆಯಲ್ಲಿ ಕೃಷಿ ಕ್ಷೇತ್ರಕ್ಕಿಂತ ತೋಟಗಾರಿಕೆಯಲ್ಲಿ ಕ್ರಾಂತಿಯಾಗಿದೆ. ಆದರೆ ತೋಟಗಾರಿಕೆ ಬೆಳೆಗಳಿಗೆ ಸೂಕ್ತ ಮಾರುಕಟ್ಟೆ ವ್ಯವಸ್ಥೆ ಇಲ್ಲದೆ ತೊಡಕಾಗಿದೆ. ಹಾಗಾಗಿ ಮಾರುಕಟ್ಟೆ ಅಭಿವೃದ್ಧಿಗೆ ಆದ್ಯತೆ ನೀಡಬೇಕಾಗಿದೆ, ಜಿಲ್ಲೆಯಲ್ಲಿ ತೋಟಗಾರಿಕೆಯಲ್ಲಿ ಯಶಸ್ಸು ಕಂಡ ರೈತರ ಬಗ್ಗೆ ಹೆಚ್ಚಿನ ಪ್ರಚಾರ ನೀಡಿದಲ್ಲಿ ಇತರರಿಗೂ ಇದು ಪ್ರೇರಣೆಯಾಗಲಿದೆ ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ತೋಟಗಾರಿಕೆ ಸಂಘದ ಖಜಾಂಚಿ ನಾಗರಾಜ್ ಬೇದ್ರೆ, ಕಾರ್ಯದರ್ಶಿ ಗಿರೀಶ್, ನಿರ್ದೇಶಕರಾದ ಶ್ವೇತಾ ವಿಶ್ವನಾಥ್, ಸತ್ಯನಾರಾಯಣ ನಾಯ್ಡು, ರೀನಾ ವೀರಭದ್ರಪ್ಪ, ಸುಮನಾ ತಿಮ್ಮಾರೆಡ್ಡಿ ಇದ್ದರು.

## ಫಾಸ್ಟ್ ನ್ಯೂಸ್

### ನಾಯಕನಹಟ್ಟಿ ಶ್ರೀ ಗುರು ತಿಪ್ಪೇರುದ್ರಸ್ವಾಮಿ ಜಾತ್ರೆ : ಫೆ. 17 ರಂದು ಪೂರ್ವಭಾವಿ ಸಭೆ

» ಚಿತ್ರದುರ್ಗ

ಚಳ್ಳಕೆರೆ ತಾಲ್ಲೂಕು ನಾಯಕನಹಟ್ಟಿ ಗ್ರಾಮದ ಶ್ರೀ ಗುರು ತಿಪ್ಪೇರುದ್ರಸ್ವಾಮಿ ಜಾತ್ರಾ ಮಹೋತ್ಸವ ನಿಮಿತ್ತ ಮಾರ್ಚ್ 09 ರಿಂದ 24 ರವರೆಗೆ ನಡೆಯಲಿದ್ದು, ಮಾ. 16 ರಂದು ರಥೋತ್ಸವ ಜರುಗಲಿದೆ. ಈ ಕುರಿತಂತೆ ಸಿದ್ಧತೆಗಳನ್ನು ಕೈಗೊಳ್ಳಲು ಫೆ. 17 ರಂದು ಬೆಳಿಗ್ಗೆ 11 ಗಂಟೆಗೆ ಪೂರ್ವಭಾವಿ ಸಭೆ ನಾಯಕನಹಟ್ಟಿ ಶ್ರೀ ಗುರುತಿಪ್ಪೇರುದ್ರಸ್ವಾಮಿ ದೇವಸ್ಥಾನದ ಒಳಮಠ ಆವರಣದಲ್ಲಿ ಜರುಗಲಿದೆ. ಸಭೆಯ ಅಧ್ಯಕ್ಷತೆಯನ್ನು ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಅವರು ವಹಿಸುವರು. ಸಭೆಯಲ್ಲಿ ಮೊಳಕಾಲ್ಮೂರು ಶಾಸಕರು, ಜಿಲ್ಲಾಧಿಕಾರಿಗಳು ಸೇರಿದಂತೆ ವಿವಿಧ ಜನಪ್ರತಿನಿಧಿಗಳು, ಅಧಿಕಾರಿಗಳು ಭಾಗವಹಿಸುವರು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಅವರು ತಿಳಿಸಿದ್ದಾರೆ.

### ಅವಿರೋಧ ಆಯ್ಕೆ



» ಚಿತ್ರದುರ್ಗ

ನಗರದ ಮೆದೆಹಳ್ಳಿ ರಸ್ತೆಯಲ್ಲಿರುವ ಇಲಾಹಿ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿಗೆ ನಾಲ್ಕನೆ ಬಾರಿಗೆ ಅಧ್ಯಕ್ಷರಾಗಿ ಮಹಮದ್ ನಿಜಾಮುದ್ದಿನ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಗುರುವಾರ ನಡೆದ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಮಹಮದ್ ನಿಜಾಮುದ್ದಿನ್, ಉಪಾಧ್ಯಕ್ಷರಾಗಿ ಸಾಧಿಕ್‌ಬಾಷ ಇವರುಗಳ ಆಯ್ಕೆಯನ್ನು ಚುನಾವಣಾಧಿಕಾರಿ ಸಹಕಾರ ಇಲಾಖೆಯ ಗೀತ ಘೋಷಿಸಿದರು. ಸೊಸೈಟಿ ನಿರ್ದೇಶಕರುಗಳು ಹಾಗೂ ಅಪಾರ ಅಭಿಮಾನಿಗಳು ಅಧ್ಯಕ್ಷ–ಉಪಾಧ್ಯಕ್ಷರುಗಳಿಗೆ ಬೃಹಧಾಕಾರವಾದ ಹಾರ ಹಾಕಿ ಶುಭ ಹಾರೈಸಿದರು.

### ಜೆಇಇ: ಎಸ್‌ಎಲ್‌ವಿಗೆ ಕಾಲೇಜಿಗೆ ಉತ್ತಮ ಫಲಿತಾಂಶ

» ಚಿತ್ರದುರ್ಗ

ಜೆಇಇ. ರಾಷ್ಟ್ರ ಮಟ್ಟದ ಮುಖ್ಯ ಪರೀಕ್ಷೆಯಲ್ಲಿ ಎಸ್.ಎಲ್.ವಿ. ಪದವಿಪೂರ್ವ ಕಾಲೇಜಿಗೆ ಉತ್ತಮ ಫಲಿತಾಂಶ ಲಭಿಸಿದ್ದು, 20 ವಿದ್ಯಾರ್ಥಿಗಳು ಅರ್ಹತೆ ಪಡೆದಿದ್ದಾರೆ. ಸಂತೋಷ್‌ಕುಮಾರ್ ಎಲ್. ಬೊಮ್ಮಲಿಂಗ ಬಿ. ಉಷಾ ವೈ. ಸೇರಿದಂತೆ 20 ವಿದ್ಯಾರ್ಥಿಗಳು ಅರ್ಹತೆ ಹೊಂದಿರುವುದರ ಹಿಂದೆ ಕಾಲೇಜಿನ ನುರಿತ ಉಪನ್ಯಾಸಕರುಗಳು ಪರೀಕ್ಷೆಗೆ ಸಂಬಂಧಿಸಿದಂತೆ ನೀಡಿರುವ ತರಬೇತಿಯಿಂದ ಉತ್ತಮ ಅಂಕಗಳನ್ನು ಗಳಿಸಲು ಸಾಧ್ಯವಾಗಿದೆ. ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿ ಹೆಚ್. ಚಂದ್ರಕಲಾ, ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಂ.ಸಿ.ರಘುಚಂದನ್, ಪ್ರಾಂಶುಪಾಲರಾದ ಕೇಶವಮೂರ್ತಿ ಸಂಯೋಜಕರಾದ ಕೊಟ್ರೇಶ್, ಎಸ್.ಎಲ್.ವಿ. ಪಿ.ಯು. ಕಾಲೇಜಿನ ಉಪನ್ಯಾಸಕರುಗಳು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

### ಬಾಡಿಗೆ ಕಟ್ಟಡ ಬೇಕಾಗಿದೆ

» ದಾವಣಗೆರೆ

ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನಡೆಸಲಾಗುತ್ತಿರುವ ಬಾಲಕಿಯರ ವಿದ್ಯಾರ್ಥಿನಿಲಯಕ್ಕೆ ಬಾಡಿಗೆ ಕಟ್ಟಡ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಡಾ.ಬಿ.ಆರ್ ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ ಬಿ.ಐ.ಇ.ಟಿ ರಸ್ತೆ ದಾವಣಗೆರೆ ವಿದ್ಯಾರ್ಥಿ ನಿಲಯವು ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿದ್ದು ಹೆಚ್ಚುವರಿಯಾಗಿ 200 ವಿದ್ಯಾರ್ಥಿನಿಯರಿಗೆ ವಸತಿ ವ್ಯವಸ್ಥೆ ಕಲ್ಪಿಸಬೇಕಾಗಿರುವುದರಿಂದನಗರದಮಧ್ಯಭಾಗದಲ್ಲಿ ಕನಿಷ್ಠ 20 ಶೌಚಾಲಯ 20 ಸ್ನಾನಗೃಹ, ಮೂಲಭೂತ ಸೌಲಭ್ಯಗಳುಳ್ಳ ಸುಸಜ್ಜಿತ ಕಟ್ಟಡವು ಬಾಡಿಗೆಗೆ ಬೇಕಾಗಿರುತ್ತದೆ ಎಂದು ಇಲಾಖೆಯ ಜಂಟಿ ನಿರ್ದೇಶಕರು ನಾಗರಾಜ ತಿಳಿಸಿದ್ದಾರೆ.

### ಆಸ್ತಿ ತೆರಿಗೆ ಸಂಗ್ರಹಣೆ ಮಾಡಲು ಮಹಿಳಾ ಸ್ವ ಸಹಾಯ ಸಂಘಗಳಿಂದ ಅರ್ಜಿ ಆಹ್ವಾನ

» ದಾವಣಗೆರೆ

ಆಸ್ತಿ ತೆರಿಗೆ ಮತ್ತು ನೀರಿನ ಶುಲ್ಕವನ್ನು ಸಮರ್ಪಕವಾಗಿ ಸಂಗ್ರಹಣೆ ಮಾಡಲು ಅರ್ಹ ಮಹಿಳಾ ಸ್ವ ಸಹಾಯ ಸಂಘಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ಮಾರ್ಚ್ 9 ರೊಳಗಾಗಿ ಜಗಳೂರು ಪಟ್ಟಣ ಪಂಚಾಯಿತಿ ಕಾರ್ಯಾಲಯಕ್ಕೆ ನಿಗಧಿತ ನಮೂನೆಯಲ್ಲಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಕಚೇರಿ ಡೇ ನಲ್ಮ್ ಕಚೇರಿಯನ್ನು ಸಂಪರ್ಕಿಸಲು ಪಂಚಾಯಿತಿ ಅಧಿಕಾರಿ ತಿಳಿಸಿದ್ದಾರೆ.

---

ಪರೀಕ್ಷಾ ಪಾವಿತ್ರ್ಯತೆ ಕಾಪಾಡಿ– ಬಿ.ಟಿ. ಕುಮಾರಸ್ವಾಮಿ

# 15ರಂದು ವಸತಿ ಶಾಲೆಗಳ 6 ನೇ ತರಗತಿಗೆ ಪ್ರವೇಶ ಪರೀಕ್ಷೆ

» ಚಿತ್ರದುರ್ಗ

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಅಧೀನದಲ್ಲಿರುವ ವಿವಿಧ ವಸತಿ ಶಾಲೆಗಳಿಗೆ 06 ನೇ ತರಗತಿ ಪ್ರವೇಶಕ್ಕೆ ದಾಖಲಾತಿ ಪಡೆಯಲು ಪ್ರವೇಶ ಪರೀಕ್ಷೆ ಫೆ. 15 ರಂದು ಜಿಲ್ಲೆಯಾದ್ಯಂತ ನಡೆಯಲಿದ್ದು, ಅಧಿಕಾರಿಗಳು ಪರೀಕ್ಷಾ ಪಾವಿತ್ರ್ಯತೆ ಕಾಪಾಡುವ ನಿಟ್ಟಿನಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಅವರು ಸೂಚನೆ ನೀಡಿದರು.

ವಸತಿ ಶಾಲೆಗಳಲ್ಲಿ ಬರುವ ಶೈಕ್ಷಣಿಕ ವರ್ಷಕ್ಕೆ 6 ನೇ ತರಗತಿ ದಾಖಲಿಗೆ ಪ್ರವೇಶ ಪರೀಕ್ಷೆ ನಡೆಸುವ ಸಂಬಂಧ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಏರ್ಪಡಿಸಿದ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಅಧೀನದಲ್ಲಿರುವ ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ, ಏಕಲವ್ಯ ಮಾದರಿ, ಅಟಲ್ ಬಿಹಾರಿ ವಾಜಪೇಯಿ, ಶ್ರೀಮತಿ ಇಂದಿರಾ ಗಾಂಧಿ, ಡಾ. ಬಿ.ಆರ್. ಅಂಬೇಡ್ಕರ್, ಮಾಸ್ತಿ ವೆಂಕಟೇಶ ಅಯ್ಯಂಗಾರ್, ಸಂಗೊಳ್ಳಿ ರಾಯಣ್ಣ, ಕವಿ ರನ್ನ, ಗಾಂಧಿ ತತ್ವ, ಶ್ರೀ ನಾರಾಯಣ ಗುರು ಮುಂತಾದ ವಸತಿ ಶಾಲೆಗಳಿಗೆ 6 ನೇ ತರಗತಿ ಪ್ರವೇಶಕ್ಕೆ ದಾಖಲಾತಿ ಪಡೆಯಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಫೆ. 15 ರಂದು ಮಧ್ಯಾಹ್ನ 02.30 ರಿಂದ ಸಂಜೆ 4.30 ರವರೆಗೆ ಜಿಲ್ಲೆಯ ಒಟ್ಟು 20 ಪರೀಕ್ಷಾ ಕೇಂದ್ರಗಳಲ್ಲಿ ಪ್ರವೇಶ ಪರೀಕ್ಷೆ ನಡೆಯಲಿದ್ದು, ಒಟ್ಟು 7317 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲು ನೊಂದಾಯಿಸಿಕೊಂಡಿದ್ದಾರೆ.



ಪ್ರವೇಶ ಪರೀಕ್ಷೆಯನ್ನು ವ್ಯವಸ್ಥಿತ ರೀತಿಯಲ್ಲಿ ಯಾವುದೇ ಗೊಂದಲಗಳಿಗೆ ಅವಕಾಶ ಮಾಡಿಕೊಡದಂತೆ, ಪರೀಕ್ಷಾ ಪಾವಿತ್ರ್ಯತೆಯನ್ನು ಕಾಪಾಡಿಕೊಂಡು ನಡೆಸಬೇಕು. ಪರೀಕ್ಷಾ ಕೇಂದ್ರಗಳಿಗೆ ನಿಗದಿತ ವೇಳೆಯೊಳಗೆ ಆಯಾ ಮಾರ್ಗಾಧಿಕಾರಿಗಳು ಪ್ರಶ್ನೆಪತ್ರಿಕೆಯನ್ನು ತಲುಪಿಸಬೇಕು. ಪರೀಕ್ಷೆ ಬಳಿಕ ಎಲ್ಲ ಸುರಕ್ಷತಾ ಕ್ರಮಗಳನ್ನು ಕೈಗೊಂಡು, ನಿಗದಿತ ಸ್ಥಳಕ್ಕೆ ಉತ್ತರ ಪತ್ರಿಕೆಗಳನ್ನು ಮೌಲ್ಯಮಾಪನಕ್ಕಾಗಿ ತಲುಪಿಸುವ ಕಾರ್ಯವನ್ನು ಕೈಗೊಳ್ಳಬೇಕು.

ಈಗಾಗಲೆ ಪರೀಕ್ಷಾ ದಿನದಂದು ಪರೀಕ್ಷಾ ಕೇಂದ್ರಗಳ ಸುತ್ತ 200 ಮೀ. ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿದ್ದು, ಪೊಲೀಸ್ ಇಲಾಖೆಯವರು ಪರೀಕ್ಷಾ ದಿನದಂದು ಕೇಂದ್ರಗಳಿಗೆ ಸೂಕ್ತ ಪೊಲೀಸ್ ಬಂದೋಬಸ್ತ್ ಕೈಗೊಳ್ಳಬೇಕು. ಪರೀಕ್ಷಾ ಕೇಂದ್ರದೊಳಗೆ ಯಾವುದೇ ಮೊಬೈಲ್, ಎಲೆಕ್ಟ್ರಾನಿಕ್ ಉಪಕರಣಗಳನ್ನು ಬಳಸದಂತೆ ಸೂಕ್ತ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು, ಹಾಗೂ ವಿದ್ಯಾರ್ಥಿಗಳು ಪರೀಕ್ಷಾ ಕೇಂದ್ರ ಪ್ರವೇಶ ಸಂದರ್ಭದಲ್ಲಿ ಸೂಕ್ತ ರೀತಿಯಲ್ಲಿ ತಪಾಸಣೆಯನ್ನು ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ (ಪದವಿಪೂರ್ವ) ಉಪನಿರ್ದೇಶಕ ಪುಟ್ಟಸ್ವಾಮಿ ಅವರು ಪ್ರವೇಶ ಪರೀಕ್ಷೆ ಕುರಿತು ಮಾಹಿತಿ ನೀಡಿ, ಪ್ರವೇಶ ಪರೀಕ್ಷೆಗೆ ಜಿಲ್ಲೆಯಲ್ಲಿ ಒಟ್ಟು 20 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಿದ್ದು, 7317 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಚಳ್ಳಕೆರೆ ತಾಲ್ಲೂಕಿನಲ್ಲಿ 5 ಪರೀಕ್ಷಾ ಕೇಂದ್ರಗಳಲ್ಲಿ 1919 ವಿದ್ಯಾರ್ಥಿಗಳು.

ಚಿತ್ರದುರ್ಗ ತಾಲ್ಲೂಕಿನ 2 ಕೇಂದ್ರಗಳಲ್ಲಿ 915 ವಿದ್ಯಾರ್ಥಿಗಳು, ಹಿರಿಯೂರಿನ 3 ಕೇಂದ್ರಗಳಲ್ಲಿ 1341 ವಿದ್ಯಾರ್ಥಿಗಳು, ಹೊಳಲ್ಕೆರೆಯ 2 ಕೇಂದ್ರಗಳಲ್ಲಿ 591 ವಿದ್ಯಾರ್ಥಿಗಳು, ಹೊಸದುರ್ಗದ 4 ಕೇಂದ್ರಗಳಲ್ಲಿ 1297 ವಿದ್ಯಾರ್ಥಿಗಳು ಹಾಗೂ ಮೊಳಕಾಲ್ಮೂರು ತಾಲ್ಲೂಕಿನ 04 ಪರೀಕ್ಷಾ ಕೇಂದ್ರಗಳಲ್ಲಿ 1254 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ.ಪರೀಕ್ಷಾ ಕೇಂದ್ರಗಳಿಗೆ ಪ್ರಶ್ನೆಪತ್ರಿಕೆ ತಲುಪಿಸಲು ಹಾಗೂ ಉತ್ತರ ಪತ್ರಿಕೆ ಸ್ವೀಕರಿಸಲು ಈಗಾಗಲೆ 21 ಮಾರ್ಗಾಧಿಕಾರಿಗಳನ್ನು ನೇಮಿಸಲಾಗಿದೆ. ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯ ಒಳಗೆ ಕ್ಯಾಲ್ಕುಲೇಟರ್, ಮೊಬೈಲ್ ಫೋನ್, ಬ್ಲೂಟೂತ್ ಡಿವೈಸ್ ಇತ್ಯಾದಿ ಎಲೆಕ್ಟ್ರಾನಿಕ್ ಉಪಕರಣಗಳನ್ನು ತರುವುದನ್ನು ನಿಷೇಧಿಸಲಾಗಿದೆ ಎಂದರು.ಸಭೆಯಲ್ಲಿ ಜಿಲ್ಲೆಯ ಎಲ್ಲ ಕ್ಷೇತ್ರ ಶಿಕ್ಷಣಾಧಿಕಾರಿಗಳು, ತಹಸಿಲ್ದಾರರು, ಪರೀಕ್ಷಾ ಕೇಂದ್ರಗಳ ವ್ಯಾಪ್ತಿಯ ಉಪನ್ಯಾಸಕರು, ಪ್ರಾಂಶುಪಾಲರುಗಳು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

---

# ಮೈಕ್ರೋಫೈನಾನ್ಸ್ ಸಂಸ್ಥೆಗಳ ಕಿರುಕುಳ ನಿಯಂತ್ರಣಕ್ಕೆ ಸರ್ಕಾರಿ ಆಧ್ಯಾದೇಶ ಜಾರಿ

» ಚಿತ್ರದುರ್ಗ

ಮಧ್ಯಮ ಹಾಗೂ ಕೆಳ ಮಧ್ಯಮ ವರ್ಗದವರು ಸಣ್ಣ ಫೈನಾನ್ಸ್ ಸಂಸ್ಥೆಗಳಲ್ಲಿ ಸಾಲ ಪಡೆದು ಮರುಪಾವತಿಸುವಲ್ಲಿ ವಿಳಂಬ ಮಾಡುವ ಸಾಲಗಾರರ ಮೇಲೆ ಮೈಕ್ರೋಫೈನಾನ್ಸ್ ಸಂಸ್ಥೆಗಳು, ಸಾಲ ನೀಡಿಕೆ ಏಜೆನ್ಸಿಗಳು ಹಾಗೂ ಲೇವಾದೇವಿಗಾರರು ನೀಡುವ ಕಿರುಕುಳ ಹಾಗೂ ಬಲವಂತದ ವಸೂಲಾತಿ ಕ್ರಮಗಳನ್ನು ನಿಯಂತ್ರಿಸಲು ಸರ್ಕಾರವು ಕರ್ನಾಟಕ ಕಿರು (ಮೈಕ್ರೋ) ಸಾಲ ಮತ್ತು ಸಣ್ಣ ಸಾಲ (ಬಲವಂತದ ಕ್ರಮಗಳ ಪ್ರತಿಬಂಧಕ) ಆಧ್ಯಾದೇಶ 2025ನ್ನು ಫೆಬ್ರವರಿ 12 ರಿಂದ ಜಾರಿಗೊಳಿಸಿದ್ದು, ಆದೇಶದ ಮುಖ್ಯಾಂಶಗಳು ಹೀಗಿವೆ.

ಮೈಕ್ರೋಫೈನಾನ್ಸ್ ಸಂಸ್ಥೆಗಳು ಸಾಲಗಾರರಿಂದ ಯಾವುದೇ ಭದ್ರತೆ ಪಡೆಯಬಾರದು. ಗ್ರಾಹಕರಿಗೆ ವಿಧಿಸುವ ಬಡ್ಡಿದರಗಳ ಬಗ್ಗೆ ಪಾರದರ್ಶಕವಾಗಿ ಲಿಖಿತ ರೂಪದಲ್ಲಿ ತಿಳಿಸಬೇಕು. ಈ ಆದೇಶವು ಭಾರತೀಯ ರಿಸರ್ವ್ ಬ್ಯಾಂಕ್, ಕೇಂದ್ರ ಮತ್ತು ರಾಜ್ಯ ಸರ್ಕಾರಗಳಲ್ಲಿ ನೊಂದಣಿಯಾಗದ ಮೈಕ್ರೋಫೈನಾನ್ಸ್ ಸಂಸ್ಥೆಗಳಿಗೆ ಮಾತ್ರ ಅನ್ವಯಿಸುತ್ತದೆ. ನೊಂದಾಯಿತ ಸಂಸ್ಥೆಗಳಿಂದ ಅಂದಾಜು 60 ಸಾವಿರ ಕೋಟಿ ರೂ ಸಾಲವನ್ನು ಸುಮಾರು 1.09 ಕೋಟಿ ಸಾಲಗಾರರು ಪಡೆದಿದ್ದಾರೆ. ನೊಂದಣಿಯಾಗದ ಸಂಸ್ಥೆಗಳಿಂದ ಸಾಲ ಪಡೆದವರ ಮಾಹಿತಿ ನಿಖರವಾಗಿ ಲಭ್ಯವಿಲ್ಲವಾದರೂ, ಅಂದಾಜು 40 ಸಾವಿರ ಕೋಟಿ ರೂ ಸಾಲ ಪಡೆದಿದ್ದಾರೆ ಎಂಬ ಮಾಹಿತಿ ಇದೆ.

ಮೈಕ್ರೋಫೈನಾನ್ಸ್ ಸಂಸ್ಥೆಗಳು ತಾವು ವ್ಯವಹರಿಸುತ್ತಿರುವ ಜಿಲ್ಲೆಗಳ ಜಿಲ್ಲಾಧಿಕಾರಿಗಳಲ್ಲಿ ನೊಂದಣಿಯಾಗುವುದು ಕಡ್ಡಾಯವಾಗಿದೆ. ಈ ಸಂಸ್ಥೆಗಳು ವಿಧಿಸುವ ಬಡ್ಡಿದರ, ಸಾಲಗಾರರ ಮಾಹಿತಿ ಹಾಗೂ ಸುಸ್ತಿ ಸಾಲಗಳ ವಿವರಗಳನ್ನು ಜಿಲ್ಲಾಧಿಕಾರಿಗಳಿಗೆ ನೀಡಬೇಕು. ತ್ರೈ ಮಾಸಿಕ ಮತ್ತು ವಾರ್ಷಿಕ ವ್ಯವಹಾರದ ವಿವರಗಳನ್ನು ಜಿಲ್ಲಾಧಿಕಾರಿಗಳಿಗೆ ಸಲ್ಲಿಸಬೇಕು. ನಿಗದಿತ ಅವಧಿಯಲ್ಲಿ ಮಾಹಿತಿಯನ್ನು ಸಲ್ಲಿಸದಿದ್ದರೆ 6 ತಿಂಗಳ ಕಾರಗೃಹವಾಸ ಅಥವಾ 10 ಸಾವರಿರೂ ವರೆಗೆ ದಂಡ ಅಥವಾ ಎರಡೂ ಶಿಕ್ಷೆಗೆ ಗುರಿಯಾಗುತ್ತಾರೆ.

ವಿವಾದಗಳನ್ನು ಇತ್ಯರ್ಥಗಳನ್ನು ಒಂಬುಡ್ಸ್‌ಮನ್ ಗಳನ್ನು ಸರ್ಕಾರ ಅಧಿಸೂಚನೆ ಮೂಲಕ ನೇಮಕ ಮಾಡುವ ಅಧಿಕಾರ ಹೊಂದಿರುತ್ತದೆ.



> ಬಲವಂತದ ವಸೂಲಾತಿಗಳನ್ನು ಕೈಗೊಳ್ಳುವ ವ್ಯಕ್ತಿಯು ವಿಚಾರಣೆಗೆ ಒಳಪಡುತ್ತಾನೆ, ಹತ್ತು ವರ್ಷಗಳ ವರೆಗೆ ವಿಸ್ತರಿಸಬಹುದಾದ ಕಾರಗೃಹವಾಸ ಶಿಕ್ಷೆ ಹಾಗೂ 5 ಲಕ್ಷ ರೂ ವರೆಗೆ ವಿಧಿಸಬಹುದಾದ ಜುಲ್ಮಾನೆಗೆ ಒಳಪಡುತ್ತಾನೆ. ಈ ಅಪರಾಧಗಳು ಸಂಜ್ಞೆಯ (ಕಾಗ್ನಿಜಿಬಲ್) ಹಾಗೂ ಜಾಮೀನು ರಹಿತ (ನಾನ್ ಬೇಲೆಬಲ್) ಪ್ರಕರಣಗಳಾಗಿರುತ್ತವೆ. ಯಾವುದೇ ಪೊಲೀಸ್ ಅಧಿಕಾರಿಗಳು ಇಂತಹ ಪ್ರಕರಣಗಳನ್ನು ನೊಂದಣಿ ಮಾಡಿಕೊಳ್ಳಲು ನಿರಾಕರಿಸಬಾರದು. ಪೊಲೀಸ್ ಉಪ ಅಧೀಕ್ಷಕ (ಡಿವೈಎಸ್‌ಪಿ) ದರ್ಜೆಗಿಂತ ಕಡಿಮೆ ಇಲ್ಲದ ಅಧಿಕಾರಿಯು ಸ್ವತಃ (ಸುಮೊಟೊ) ಪ್ರಕರಣ ದಾಖಲಿಸಬಹುದು. ಸರ್ಕಾರವು ಈ ಅಧ್ಯಾದೇಶದ ಅನುಷ್ಠಾನಕ್ಕೆ ಕಾಲಕಾಲಕ್ಕೆ ನಿರ್ದೇಶನಗಳನ್ನು ನೀಡುವ ಅಧಿಕಾರ ಹೊಂದಿರುತ್ತದೆ. ಈ ಆದೇಶದಿಂದ ಆರ್.ಬಿ.ಐ ಮತ್ತು ಕೇಂದ್ರ / ರಾಜ್ಯ ಸರ್ಕಾರಗಳಿಂದ ನೊಂದಣಿಯಾಗದ ಮೈಕ್ರೋಫೈನಾನ್ಸ್ ಸಂಸ್ಥೆಗಳಲ್ಲಿ ಆರ್ಥಿಕ ಶಿಸ್ತು ಹೆಚ್ಚಿಸಲು ಹಾಗೂ ಸಾಲಗಾರರಿಗೆ ಕಿರುಕುಳ, ಬಲವಂತದ ವಸೂಲಿ ಕ್ರಮಗಳಿಂದ ಮುಕ್ತಿ ನೀಡುತ್ತದೆ.
>
> » **ಡಾ. ಶಾಲಿನಿ ರಜನೀಶ್, ಸರ್ಕಾರದ ಮುಖ್ಯ ಕಾರ್ಯದರ್ಶಿಗಳುಕರ್ನಾಟಕ ಸರ್ಕಾರ**

---

### ಡಿಸಿಪಿ ವಾಹನದ ಮೇಲೆ ಕಲ್ಲು ತೂರಾಟ: ಶೀಘ್ರ ಆರೋಪಿಗಳನ್ನು ಬಂಧಿಸುವಂತೆ ಮನವಿ



» ಚಿತ್ರದುರ್ಗ

ಮೈಸೂರಿನ ಉದಯಗಿರಿ ಪೊಲೀಸ್ ಡಿ.ಸಿ.ಪಿ. ವಾಹನದ ಮೇಲೆ ಕಲ್ಲು ತೂರಾಟ ನಡೆಸಿರುವವರನ್ನು ಕೂಡಲೆ ಬಂಧಿಸಿ ಕಾನೂನು ರೀತಿಯ ಕ್ರಮ ಕೈಗೊಂಡು ಜಾಮೀನಿಗೆ ಯಾರು ವಕಾಲತ್ತು ಹಾಕದಂತೆ ಕಟ್ಟೆಚ್ಚರ ವಹಿಸಬೇಕೆಂದು ಕರುನಾಡ ವಿಜಯಸೇನೆ ವತಿಯಿಂದ ಹೆಚ್ಚುವರಿ ರಕ್ಷಣಾಧಿಕಾರಿಗೆ ಬುಧವಾರ ಮನವಿ ಸಲ್ಲಿಸಲಾಯಿತು.

ಈ ಹಿಂದೆ ಬೆಂಗಳೂರಿನ ಡಿಜೆ. ಹಳ್ಳಿ, ಕೆ.ಜಿ.ಹಳ್ಳಿಯಲ್ಲಿಯೂ ಪೊಲೀಸ್ ಠಾಣೆಗಳ ಮೇಲೆ ದಾಳಿ ನಡೆದಿತ್ತು. ಸಾರ್ವಜನಿಕರಿಗೆ ರಕ್ಷಣೆ ನೀಡುವ ಕೆಲಸದಲ್ಲಿ ನಿರತರಾಗಿರುವವರ ಪೊಲೀಸರ ಮೇಲೆಯೇ ಇಂತಹ ಅಮಾನವೀಯ ಕೃತ್ಯಗಳನ್ನು ಎಸಗುವುದಾದರೆ ಜನಸಾಮಾನ್ಯರ ಪಾಡೇನು ಎಂದು ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್‌ಪ್ರಶ್ನಿಸಿದ್ದಾರೆ.ರಾಜ್ಯದಲ್ಲಿಕಾಂಗ್ರೆಸ್‌ಸರ್ಕಾರಅಧಿಕಾರಕ್ಕೆ ಬಂದಾಗಿನಿಂದಲೂ ಇಂತಹ ಕೃತ್ಯಗಳು ಮರುಕಳಿಸುತ್ತಿರುವುದರನ್ನು ನೋಡಿದರೆ ಇದೊಂದು ರಾಜಕೀಯ ಪ್ರೇರಿತವೆಂಬ ಅನುಮಾನ ಕಾಡುತ್ತಿದೆ. ರಾಜಕೀಯ ಪಕ್ಷಗಳು ಮತ ಬ್ಯಾಂಕ್ ಮಾಡಿಕೊಳ್ಳುವ ಉದ್ದೇಶದಿಂದ ಇಂತಹ ಕೃತ್ಯ ಎಸಗುವವರ ಮೇಲೆ ಯಾವುದೇ ರೀತಿಯ ಕ್ರಮ ಕೈಗೊಳ್ಳದಿರುವ ಕಾರಣ ಕಾನೂನು ಮತ್ತು ಸುವ್ಯವಸ್ಥೆ ಹದಗೆಟ್ಟಿದೆ. ಹಾಗಾಗಿ ಕಿಡಿಗೇಡಿಗಳನ್ನು ಕೂಡಲೆ ಬಂಧಿಸಿ ಕಾನೂನು ರೀತಿ ಶಿಕ್ಷೆಗೆ ಗುರಿಪಡಿಸುವಂತೆ ಕರುನಾಡ ವಿಜಯಸೇನೆ ಕಾರ್ಯಕರ್ತರು ಒತ್ತಾಯಿಸಿದರು.ಕರುನಾಡ ವಿಜಯಸೇನೆ ಮಹಿಳಾ ಘಟಕದ ಅಧ್ಯಕ್ಷೆ ವೀಣಗೌರಣ್ಣ, ಗೋಪಿನಾಥ್, ವಿಜಯಬಾಬು, ಶಶಿ, ರತ್ನಮ್ಮ, ಮುಜಾಹಿದ್, ಸುರೇಶ್, ಅಖಿಲೇಶ್, ಮಧುಸೂದನ್‌ಅವಿನಾಶ್, ಜಗದೀಶ್, ನಾಗೇಶ್ ಈ ಸಂದರ್ಭದಲ್ಲಿದ್ದರು.

---

### ಫೆಬ್ರವರಿ 17 ರಂದು ಸಾಮಾನ್ಯ ಸಭೆ

ದಾವಣಗೆರೆ: ಮಹಾನಗರಪಾಲಿಕೆ ಮಹಾಪೌರರಾದ ಚಮನ್‌ಸಾಬ್ ಕೆ ಅವರ ಅಧ್ಯಕ್ಷತೆಯಲ್ಲಿ ಫೆಬ್ರವರಿ 17 ರಂದು ಬೆಳಿಗ್ಗೆ 11 ಗಂಟೆಗೆ ಪಾಲಿಕೆಯ ಸಭಾಂಗಣದಲ್ಲಿ ಸಾಮಾನ್ಯ ಸಭೆಯನ್ನು ಆಯೋಜಿಸಲಾಗಿದೆ ಎಂದು ಪಾಲಿಕೆಯ ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ.

### ಆಕ್ಷೇಪಣೆಗಳಿಗೆ ಅರ್ಜಿ ಆಹ್ವಾನ

ದಾವಣಗೆರೆ: ಮಲೇಬೆನ್ನೂರು ಪುರಸಭೆ ವ್ಯಾಪ್ತಿಯಲ್ಲಿ ವ್ಯಾಪಾರ ನಡೆಸುವ ಪರವಾನಿಗೆ ದರ ಪರಿಷ್ಕರಣೆ ಬಗ್ಗೆ ಆಕ್ಷೇಪಣೆ ಇದ್ದಲ್ಲಿ 30 ದಿನಗಳ ಒಳಗಾಗಿ ಮುಖ್ಯಾಧಿಕಾರಿ, ಪುರಸಭೆ, ಮಲೇಬೆನ್ನೂರು ರವರಿಗೆ ಲಿಖಿತವಾಗಿ ಆಕ್ಷೇಪಣೆಗಳನ್ನು ಸಲ್ಲಿಸಬಹುದು. .

---

## ಪ್ರಮುಖ ಸುದ್ದಿ

ಖಾಸಗಿ ಬಸ್ಟಾಂಡ್ ಶೌಚಾಲಯ ನಿರ್ಮಾಣಕ್ಕೆ ವ್ಯಾಪಾರಸ್ಥರ ವಿರೋಧ

# ನಗರಸಭೆ ಆಡಳಿತ ತನ್ನ ಯೋಜನೆ ಬದಲಾಯಿಸಿಕೊಳ್ಳಲಿ

» ಚಳ್ಳಕೆರೆ

ನಗರದ ಖಾಸಗಿ ಬಸ್ ನಿಲ್ದಾಣದಲ್ಲಿ ಪ್ರಯಾಣಿಕರು, ವ್ಯಾಪಾಸ್ಥರು ಹಾಗೂ ಸಾರ್ವಜನಿಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಸುಮಾರು 30 ಲಕ್ಷ ವೆಚ್ಚದಲ್ಲಿ ಖಾಸಗಿ ಬಸ್ಟಾಂಡ್ ಪಕ್ಕದಲ್ಲೇ ಸ್ವಚ್ಚಭಾರತ್ ಮಿಷನ್ ಯೋಜನೆಯಡಿ ಶೌಚಾಲಯ ಕಟ್ಟಡ ನಿರ್ಮಾಣ ಮಾಡುವ ಬಗ್ಗೆ ಅಲ್ಲಿನ ವ್ಯಾಪಾಸ್ಥರು ನಗರಸಭೆಯ ನಿರ್ಧಾರದ ಬಗ್ಗೆ ಬೇಸರ ವ್ಯಕ್ತಪಡಿಸಿದ್ದಾರಲ್ಲದೆ, ನ್ಯಾಯಕೊಡಿಸುವಂತೆ ಬಿಜೆಪಿ ಯುವ ಮುಖಂಡ ಕೆ.ಟಿ.ಕುಮಾರಸ್ವಾಮಿಗೆ ಮನವಿ ಮಾಡಿದರು.

ಅಲ್ಲಿನ ವ್ಯಾಪಾರಸ್ಥರ ವಿನಂತಿ ಮೇರೆಗೆ ಬಿಜೆಪಿ ಯುವಮುಖಂಡ ಕೆ.ಟಿ.ಕುಮಾರಸ್ವಾಮಿ ಸ್ಥಳಕ್ಕೆ ಆಗಮಿಸಿ ಶೌಚಾಲಯನಿರ್ಮಾಣಕಾಮಗಾರಿಯನ್ನು ಪರಿಶೀಲಿಸಿದರು. ಪ್ರಸ್ತುತ ಈ ಭಾಗದಲ್ಲಿ ಈಗಾಗಲೇ ಒಂದು ಹೈಟೆಕ್ ಸಾರ್ವಜನಿಕ ಶೌಚಾಲಯವಿದ್ದು ಅಲ್ಲಿ ಸಾರ್ವಜನಿಕರು ಉಪಯೋಗವನ್ನು ಪಡೆಯಬಹುದಾಗಿದೆ. ಆದರೆ, ನಗರಸಭೆ ಆಡಳಿತ ಹೆಚ್ಚುವರಿಯಾಗಿ



30 ಲಕ್ಷ ವೆಚ್ಚದಲ್ಲಿ ಶೌಚಾಲಯ ಕಟ್ಟಡ ನಿರ್ಮಾಣ ಮಾಡುತ್ತಿರುವುದು ಬಹುತೇಕ ವ್ಯಾಪಾಸ್ಥರಿಗೆ ಅಸಮದಾನ ಉಂಟಾಗಿದೆ. ಇದೇ ಹಣವನ್ನು ನಗರಸಭೆ ಆಡಳಿತ ಬೇರೆಯಾವುದಾದರೂ ಕಾರ್ಯಕ್ಕೆ ಉಪಯೋಗಿಸಬಹುದಾಗಿದೆ. ಅತಿಸಣ್ಣಜಾಗದಲ್ಲಿ ಶೌಚಾಲಯ ನಿರ್ಮಿಸಿದರೆ ವಾಹನ, ಸಾರ್ವಜನಿಕ ಓಡಾಟಕ್ಕೆ ಅಡಚರಣೆಯಾಗಲಿದೆ. ಕೇವಲ ಕೆಲವೇ ಅಡಿಗಳಷ್ಟು ಜಾಗವಿರುವಾಗ ಅದರಲ್ಲೂ ಶೌಚಾಲಯ ನಿರ್ಮಿಸಿ ಹಿಂಭಾಗಕ್ಕೆ ಸಂಪರ್ಕ ನೀಡುವ ರಸ್ತೆ ಬಂದ್ ಮಾಡುವ ಉದ್ದೇಶವಿದ್ದು ಈ ಬಗ್ಗೆ ವ್ಯಾಪಾಸ್ಥರು ನಗರಸಭೆ ಆಡಳಿತದ ವಿರುದ್ದ ತಮ್ಮ ಆಕ್ರೋಶವನ್ನು ಹೊರಹಾಕಿದ್ದಾರೆ. ನನ್ನಿವಾಳದ ಮಾಜಿ ಶಾಸಕ ದಿವಂಗತ ಶಿವಶಂಕರಪ್ಪನವರ ಕುಟುಂಬ ಈ ಹಿಂದೆ ಪಾರ್ಕ್ ಜಾಗವನ್ನು ಸಾರ್ವಜನಿಕ ಉಪಯೋಗಕ್ಕಾಗಿ ಉಚಿತವಾಗಿ ನೀಡಿದ್ದರು ಎನ್ನಲಾಗಿದೆ. ಕುಟುಂಬದ ವರ್ಗದವ್ರೂ ಸಹ ಆಕ್ಷೇಪವೆತ್ತಿ ಪೌರಾಯುಕ್ತರಿಗೆ ಅರ್ಜಿ ಸಲ್ಲಿಸಿದ್ದಾರೆ.

ಯುವಮುಖಂಡ ಕೆ.ಟಿ.ಕುಮಾರಸ್ವಾಮಿ, ಹೋಟೆಲ್ ನಿವಾಸಿಗಳೊಂದಿಗೆ ಸಮಸ್ಯೆಯ ಬಗ್ಗೆ ಸುಧೀರ್ಘವಾಗಿ ಚರ್ಚೆ ನಡೆಸಿದರು. ನಗರಸಭೆ ಆಡಳಿತ ಯಾವುದೇ ಅಭಿವೃದ್ಧಿ ಕೈಗೊಂಡರೂ ಯಾವುದೇ ವಿರೋಧವನ್ನು ವ್ಯಕ್ತಪಡಿಸುವುದಿಲ್ಲ. ಆದರೆ, ಈ ಭಾಗದ ಹಲವಾರು ವ್ಯಾಪಾರಸ್ಥ ಕುಟುಂಬಗಳು ಬೀದಿಪಾಲಾಗುತ್ತವೆ. ಅವಶ್ಯಕತೆ ಇದ್ದರೆ ಹಾಲಿ ಇರುವ ಶೌಚಾಲಯವನ್ನು ವಿಸ್ತರಿಸಬಹುದಾಗಿದೆ. ಇದು ಸುಲಭದ ಕೆಲಸವಾಗುತ್ತದೆ. ಆದರೆ, ನಗರಸಭೆ ಆಡಳಿತ ಆತುರ ಆತುರವಾಗಿ ಶೌಚಾಲಯ ನಿರ್ಮಿಸಲು ಉತ್ಸಾಹತೋರಿರುವುದು ನೋವಿನ ಸಂಗತಿ ಎಂದರು. ವ್ಯಾಪಾರಸ್ಥರು, ಸಾರ್ವಜನಿಕರ ಹಿತದೃಷ್ಠಿಯಿಂದ ನಗರಸಭೆ ಆಡಳಿತ ಶೌಚಾಲಯ ನಿರ್ಮಾಣವನ್ನು ಕೂಡಲೇ ಸ್ಥಗಿತಗೊಳಿಸಬೇಕೆಂದರು.

ಬಿಜೆಪಿ ಮುಖಂಡರಾದ ಬಂಡೆರಂಗಸ್ವಾಮಿ, ದೊರೆನಾಗರಾಜು, ಮಧು, ಕೃಷ್ಣಮೂರ್ತಿ, ವ್ಯಾಪಾರಸ್ಥರಾದ ಸರೋಜಮ್ಮ, ಮಂಜುನಾಥ, ವೆಂಕಟೇಶ್, ಪಟೇಲ್, ಓಬಯ್ಯ, ವೆಂಕಟೇಶ್, ನಾಗರತ್ನಮ್ಮ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಸಂಗಮೇಶ್ವರ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾಗಿ ಚಂದ್ರಪ್ಪ

» ಹೊಸದುರ್ಗ

ಪಟ್ಟಣದ ಶ್ರೀ ವಿಜಯರಾಯ ಸಂಗಮೇಶ್ವರ ಪತ್ತಿನ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಡಿ.ಆರ್. ಚಂದ್ರಪ್ಪ ಆಯ್ಕೆಯಾಗಿದ್ದಾರೆ.ಉಪಾಧ್ಯಕ್ಷರಾಗಿ ಕೋಡಿಹಳ್ಳಿ ಧರಣಪ್ಪ.ನಿರ್ದೇಶಕರುಗಳಾಗಿ ಹಾಲಸಿದ್ದಪ್ಪ, ದೇವರಾಜ್, ಬಸಣ್ಣ,ಕಲ್ಲಪ್ಪ,ಮಣಿ ಕಂಠ,ಮಂಜುನಾಥ್ ಶ್ರೀನಿವಾಸ್, ರವಿಕುಮಾರ್, ನರಸಿಂಹರಾಜು, ಜಯಲಕ್ಷ್ಮಮ್ಮ ಹಾಗೂ ಪದ್ಮಾವತಿ ಇವರುಗಳು ಆಯ್ಕೆಯಾಗಿದ್ದಾರೆ.

### ಎಸ್ ನಿಜಲಿಂಗಪ್ಪ ಶಾಲೆಯಲ್ಲಿ ಇಂದು ಚಿಣ್ಣರ ಹಬ್ಬ

» ಹೊಸದುರ್ಗ

ಪಟ್ಟಣದಪ್ರತಿಷ್ಠಿತಎಸ್.ನಿಜಲಿಂಗಪ್ಪಶಿಕ್ಷಣಸಂಸ್ಥೆಯ ಆವರಣದಲ್ಲಿ ಇಂದು (ಫೆ 14) ಶುಕ್ರವಾರ ಸಂಜೆ 6 ಗಂಟೆಗೆ ಚಿಣ್ಣರ ಹಬ್ಬ ಹಾಗೂ ಗ್ರಾಂಡ್ ಪೇರೆಂಟ್ಸ್ ಡೇ ಕಾರ್ಯಕ್ರಮವನ್ನ ಆಯೋಜಿಸಲಾಗಿದೆ ಎಂದು ಸಂಸ್ಥೆಯ ಕಾರ್ಯದರ್ಶಿ ಕೆ.ಎಸ್. ಕಲ್ಮಠ್ ತಿಳಿಸಿದ್ದಾರೆ. ಸಂಸ್ಥೆಯ ಅಧ್ಯಕ್ಷ ಎಂ.ಶಿವಲಿಂಗಪ್ಪ ಅಧ್ಯಕ್ಷತೆ ವಹಿಸಲಿದ್ದು ವಿಶೇಷ ಆಹ್ವಾನಿತರಾಗಿ ಸಾಹಿತಿ ಪಿ.ಎಲ್.ಲೋಕೇಶ್ವರ್,ಶ್ರೀಮತಿಪ್ರಮಿಳಾಲೋಕೇಶ್,ಟಿ.ಸಿ.ಹೆಚ್.ಕಾಲೇಜಿನ ನಿವೃತ್ತ ಉಪನ್ಯಾಸಕ ಆರ್.ಲಕ್ಷ್ಮಯ್ಯ, ಶ್ರೀಮತಿ ಓಂಕಾರಮ್ಮಲಕ್ಷ್ಮಯ್ಯ, ಹೊಸದುರ್ಗ ನಿವೃತ್ತ ಉಪನ್ಯಾಸಕರಾದ ಚೆನ್ನಬಸಪ್ಪ, ಶ್ರೀಮತಿ ರುದ್ರಮ್ಮ ಚನ್ನಬಸಪ್ಪ,ಅವನಿಶೃಂಗೇರಿ ಮಠದ ಕಾರ್ಯದರ್ಶಿ ಕೃಷ್ಣಮೂರ್ತಿ, ಶ್ರೀಮತಿವಿಜಯಲಕ್ಷ್ಮಿಕೃಷ್ಣಮೂರ್ತಿ ಭಾಗವಹಿಸಲಿದ್ದು ಮುಖ್ಯ ಅತಿಥಿಗಳಾಗಿ ಎಸ್.ಎನ್.ಇ.ಆರ್.ಟಿ ಟ್ರಸ್ಟ್ ಉಪಾಧ್ಯಕ್ಷ ಕೆ.ಎಸ್.ಪುಟ್ಟರಾಜು, ಖಜಾಂಚಿ ಕೆ.ಸಿ.ಮಲ್ಲಿಕಾರ್ಜುನಪ್ಪ, ಅಕಾಡಮಿಕ್ ಡೈರೆಕ್ಟರ್ ಎಂ.ಬಿ.ತಿಪ್ಪೇಸ್ವಾಮಿ ಸೇರಿದಂತೆ ಟ್ರಸ್ಟಿನ ಧರ್ಮದರ್ಶಿಗಳು ಭಾಗವಹಿಸಲಿದ್ದಾರೆ. ಕಾರ್ಯಕ್ರಮದ ನಂತರ ಎಸ್.ನಿಜಲಿಂಗಪ್ಪ ಕಿಂಡರ್‌ಗಾರ್ಡನ್ ಮಕ್ಕಳಿಂದ ಸಾಂಸ್ಕೃತಿಕ ವೈಭವ ಕಾರ್ಯಕ್ರಮ ಜರುಗಲಿದೆ.

### ರಾಜ ಮನೆತನದ ಬಗ್ಗೆ ಸರ್ಕಾರ ನಿಲುವು ಸರಿಯಿಲ್ಲ: ಸಿರಿಗೆರೆ ಶ್ರೀ



» ಸಿರಿಗೆರೆ

ಮೈಸೂರು ರಾಜವಂಸಸ್ಥ ಮನೆತನದ ಬಗ್ಗೆ ರಾಜ್ಯ ಸರ್ಕಾರ ತೆಗೆದುಕೊಂಡಿರುವ ನಿಲುವನ್ನು ನಾವು ಖಂಡಿಸುತ್ತೇವೆ ಎಂದು ತರಳಬಾಳು ಜಗದ್ಗುರು ಡಾ.ಶಿವಮೂರ್ತಿ ಮಹಾಸ್ವಾಮೀಜಿ ತಿಳಿಸಿದರು. ಶಿವಾಚಾರ್ಯ ಭರಮಸಾಗರದಲ್ಲಿ ನಡೆಯುತ್ತಿರುವ ತರಳ ಬಾಳು ಹುಣ್ಣಿಮೆ ಮಹೋತ್ಸವ ಸಂದರ್ಭದಲ್ಲಿ ಸದ್ಧರ್ಮ ಸಿಂಹಾಸನಾರೋಹಣ ಮಾಡಿದ ತರಳಬಾಳು ಶ್ರೀಗಳು ಆಶೀರ್ವಚನ ನೀಡಿದರು. ರಾಜಮನೆತನವನ್ನು ಸರ್ಕಾರ ಗೋಳು ಹೊಯ್ದುಕೊಳ್ಳುತ್ತಿದೆ. ಮನೆತನದ ವಿರುದ್ಧ ದಾಖಲಿಸಿರುವ ಎಲ್ಲಾ ಪ್ರಕರಣಗಳನ್ನು ವಾಪಾಸು ಪಡೆದು ಅವರ ಜೊತೆಗೆ ಮುಕ್ತ ಸಂವಾದ ನಡೆಸಬೇಕು ಎಂದು ಹೇಳಿದರು.ಮೈಸೂರು ರಾಜ ಮನೆತನ ತಮ್ಮ ಬಹಳಷ್ಟು ಸಂಪತ್ತನ್ನು ಸರ್ಕಾರಕ್ಕೆ ಒಪ್ಪಿಸಿದೆ. ಹೀಗಿದ್ದರೂ ಅವರ ಮನೆತನವನ್ನು ಗೋಳು ಹೊಯ್ದುಕೊಳ್ಳುತ್ತಿದೆ. ರಾಜಮನೆತನದ ಬಗ್ಗೆ ಇಟ್ಟುಕೊಳ್ಳಬೇಕಾದಗೌರವಪ್ರಜಾಪ್ರಭುತ್ವದ ಕಾಲದಲ್ಲಿ ಉಳಿದಿಲ್ಲ ಎಂದರು. ಇಂಗ್ಲೆಂಡಿನಲ್ಲಿರಾಜಪ್ರಭುತ್ವದಜೊತೆಗೆ ಪ್ರಜಾ ಪ್ರಭುತ್ವವೂ ಇದೆ. ಅದೇ ರೀತಿ ರಾಜಮನೆತನದ ವರನ್ನು ರಾಜ್ಯದ ಗವರ್ನರ್ ಆಗಿ ನೇಮಿಸಿಕೊಳ್ಳ ಬೇಕು. ರಾಜ್ಯ ಸರ್ಕಾರವು ಗವರ್ನರ್ ಸ್ಥಾನವನ್ನು ರಾಜಕಾರಣಕ್ಕೆ ದುರ್ಬಳಕೆ ಮಾಡಿಕೊಳ್ಳುತ್ತಿದೆ. ಇದು ಕೊಳಕು ರಾಜಕೀಯ ಎಂದರು. 6 ನಮ್ಮ ಮಠಕ್ಕೂಮೈಸೂರು ಅರಸು ಮನೆತನಕ್ಕೂ ದಶಕಗಳ ಸಂಬಂಧ ಇದೆ. ಲಿಂಗೈಕ್ಯ ಗುರುಗಳ ಕಾಲದಲ್ಲಿ ಚಿತ್ರದುರ್ಗದಲ್ಲಿ ನಡೆದ ತರಳಬಾಳು ಹುಣ್ಣಿಮೆ ಮಹೋತ್ಸವದಲ್ಲಿ ಜಯಚಾಮರಾಜ ಒಡೆಯರ್ ಭಾಗಿಯಾಗಿ ವಚನಗಳ ಇಂಗ್ಲಿಷ್ ಅನುವಾದ ಕೃತಿಯನ್ನು ಬಿಡುಗಡೆ ಮಾಡಿದ್ದರು. ಈಗ ಇತಿಹಾಸದ ಕಾಲಚಕ್ರ ತಿರುಗಿದೆ. ರಾಜ ಮನೆತನದ ಮಹಾರಾಜರು ಹುಣ್ಣಿಮೆ ಮಹೋತ್ಸವದ ಕಾರ್ಯಕ್ರಮದಲ್ಲಿ ಭಾಗಿಯಾಗಿ ಶರಣರ ವಚನ ಸಂಪುಟ ವೆಬ್ ತಂತ್ರಾಂಶವನ್ನು ಬಿಡುಗಡೆ ಮಾಡಿದ್ದಾರೆ ಎಂದರು. ಮಾಜಿ ಸಿಎಂ, ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ, ಮಾಜಿ ಸಚಿವ ಜೆ.ಸಿ.ಮಾಧು ಸ್ವಾಮಿ, ಮಾಜಿ ಸಂಸದ ಜಿ.ಎಂ. ಸಿದ್ದೇಶ್ವರ್, ಸುವರ್ಣ ನ್ಯೂಸ್ ಸಂಪಾದಕ ಅಜಿತ್ ಹನುಮಕ್ಕನವರ್, ಎಂ.ಕೃಷ್ಣಗೌಡ, ಬಿ.ಎಂ. ಸುರೇಶ್, ಎಚ್.ಎಸ್.ಹರಿಶಂಕರ್, ವಾರಣಾಸಿಯ ಬೆಟಿನಾ ಬೊಯ ಮರ್, ರಷ್ಯಾದ ಗಲಿನ, ಬಿ.ವಿ.ಆರತಿ ಭಾಗಿಯಾಗಿದ್ದರು.

# ಮಾರ್ಚ್‌ನಲ್ಲಿ ಉದ್ಯೋಗ ಮೇಳ: ಜಿಲ್ಲಾಧಿಕಾರಿ



» ಚಿತ್ರದುರ್ಗ

ಯುವ ಜನತೆಗೆ ಉದ್ಯೋಗಾವಕಾಶ ಕಲ್ಪಿಸುವ ನಿಟ್ಟಿನಲ್ಲಿ ಚಿತ್ರದುರ್ಗ ನಗರದಲ್ಲಿ ಉದ್ಯೋಗ ಮೇಳವನ್ನು ಮುಂಬರುವ ಮಾರ್ಚ್ ತಿಂಗಳ ಎರಡನೇ ವಾರದಲ್ಲಿ ಆಯೋಜಿಸಲಾಗುವುದು, ಮೇಳದ ಯಶಸ್ವಿಗೆ ಉಪಸಮಿತಿಗಳನ್ನು ರಚಿಸಲಾಗುವುದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಉದ್ಯೋಗ ಮೇಳ ಆಯೋಜಿಸುವ ಕುರಿತು ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

2024-25ನೇ ಸಾಲಿಗೆ ಸಂಜೀವಿನಿ-ಕೆಎಸ್‌ಆರ್‌ಎಲ್‌ಪಿಎಸ್-ಡಿಡಿಯುಜಿಕೆವೈ ಯೋಜನೆ, ಜಿಲ್ಲಾ ಪಂಚಾಯಿತಿ ಹಾಗೂ ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆ ಇವರ ಸಹಯೋಗದಲ್ಲಿ ಮುಂಬರುವ ಮಾರ್ಚ್ ತಿಂಗಳ ಎರಡನೇ ವಾರದಲ್ಲಿ ಚಿತ್ರದುರ್ಗ ನಗರದ ಸರ್ಕಾರಿ ವಿಜ್ಞಾನ ಕಾಲೇಜು ಆವರಣದಲ್ಲಿ ಆಯೋಜಿಸಲು ಅಗತ್ಯ ಸಿದ್ಧತೆ ಕೈಗೊಳ್ಳುವಂತೆ ಸೂಚಿಸಿದರು.

ಉದ್ಯೋಗ ಮೇಳ ಆಯೋಜನೆಗೆ ಸಂಬಂಧಪಟ್ಟಂತೆ ಉಪವಿಭಾಗಾಧಿಕಾರಿಗಳನ್ನು ನೋಡಲ್ ಅಧಿಕಾರಿಗಳನ್ನಾಗಿ ನೇಮಕ ಮಾಡಿ, ಶಿಷ್ಟಾಚಾರದ ಪ್ರಕಾರ ಆಹ್ವಾನ ಪತ್ರಿಕೆಯನ್ನು ಮುದ್ರಿಸಿ, ಜನಪ್ರತಿನಿಧಿಗಳನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಬೇಕು ಎಂದು ಹೇಳಿದರು.

ಜಿಲ್ಲೆಯಲ್ಲಿ ನಡೆಯುವ ಉದ್ಯೋಗ ಮೇಳ ಆಯೋಜನೆ ಕುರಿತು ಕಾಲೇಜುಗಳಲ್ಲಿ ಹಾಗೂ ವೃತಿಪರ ಶಿಕ್ಷಣ ಸಂಸ್ಥೆಗಳಿಗೆ ಹಾಗೂ ಯುವನಿಧಿ ಯೋಜನೆಯ ಫಲಾನುಭವಿಗಳು ಸಹ ಉದ್ಯೋಗದ ಮೇಳದ ಬಗ್ಗೆ ಮಾಹಿತಿ ನೀಡಬೇಕು. ಮೇಳದಲ್ಲಿ ಭಾಗವಹಿಸುವ ಉದ್ಯೋಗಾಂಕ್ಷಿಗಳಿಗೆ ಕುಡಿಯುವ ನೀರು ಸೇರಿದಂತೆ ಅಗತ್ಯ ಮೂಲ ಸೌಕರ್ಯ ಕಲ್ಪಿಸಬೇಕು ಎಂದು ತಿಳಿಸಿದ ಅವರು, ಉದ್ಯೋಗ ಮೇಳದ ನೋಂದಣಿ ಪ್ರಕ್ರಿಯೆ ಪ್ರಾರಂಭ ಮಾಡುವಂತೆ ಹಾಗೂ ನೊಂದಣಿ ಪ್ರಕ್ರಿಯೆ ಕುರಿತು ವ್ಯಾಪಕ ಪ್ರಚಾರ ನೀಡಬೇಕು, ಜಿಲ್ಲಾ ವೆಬ್‌ಸೈಟ್‌ನಲ್ಲಿಯೂ ಮಾಹಿತಿ ಒದಗಿಸಲು ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಹೆಚ್ಚಿನ ಕಂಪನಿಗಳು ಭಾಗವಹಿಸಲು ಕ್ರಮವಹಿಸಿ: ಜಿಲ್ಲೆಯ ಉದ್ಯೋಗಾಂಕ್ಷಿಗಳಿಗೆ ಉದ್ಯೋಗ ನೀಡುವ ನಿಟ್ಟಿನಲ್ಲಿ ಉದ್ಯೋಗ ಮೇಳದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಖಾಸಗಿ ಕಂಪನಿಗಳು ಭಾಗವಹಿಸಲು ವಿವಿಧ ಇಲಾಖೆಗಳು ಅಗತ್ಯ ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲೆಯ ಹಾಗೂ ರಾಜ್ಯದ ವಿವಿಧ ಕಂಪನಿಗಳನ್ನು ಆಹ್ವಾನಿಸಲು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರ ಅಧ್ಯಕ್ಷತೆಯಲ್ಲಿ ಗಣಿ ಮತ್ತು ಭೂವಿಜ್ಞಾನ ಉಪನಿರ್ದೇಶಕರು, ಜಿಲ್ಲಾ ಉದ್ಯೋಗಾಧಿಕಾರಿಗಳು, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು, ಜಿಟಿಟಿಸಿ ಪ್ರಾಂಶುಪಾಲರು ಹಾಗೂ ವಿವಿಧ ಇಲಾಖೆ ಅಧಿಕಾರಿಗಳನ್ನು ಒಳಗೊಂಡ ಸಮಿತಿ ರಚನೆ ಮಾಡಬೇಕು. ಜಿಲ್ಲೆಯಲ್ಲಿ ಆಯೋಜಿಸುವ ಉದ್ಯೋಗ ಮೇಳದಲ್ಲಿ ಕನಿಷ್ಠ 300 ರಿಂದ 500 ಯುವ ಜನರಿಗೆ ಉದ್ಯೋಗ ಕಲ್ಪಿಸುವಂತಾಗಬೇಕು ಎಂದು ಹೇಳಿದರು.

ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯೊಂದಿಗೆ ಸಂಪರ್ಕ ಸಾಧಿಸಿ, ಬೆಂಗಳೂರಿನ ಬಹುರಾಷ್ಟ್ರೀಯ ಕಂಪನಿಗಳಲ್ಲಿ ಉದ್ಯೋಗಾವಕಾಶದ ಅವಶ್ಯವಿದೆ. ಹಾಗಾಗಿ ಹೆಚ್ಚಿನ ಸಂಖ್ಯೆಯಲ್ಲಿ ಕಂಪನಿಗಳ ಪ್ರತಿನಿಧಿಗಳು ಉದ್ಯೋಗ ಮೇಳದಲ್ಲಿ ಪಾಲ್ಗೊಳ್ಳುವಂತೆ ಆಹ್ವಾನ ನೀಡಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಸಲಹೆ ನೀಡಿದರು.ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ಮುಖ್ಯ ಯೋಜನಾಧಿಕಾರಿ ಸಿ.ಎಸ್.ಗಾಯತ್ರಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಹೇಂದ್ರ ಕುಮಾರ್, ಲೀಡ್ ಬ್ಯಾಂಕ್ ವ್ಯವಸ್ಥಾಪಕ ಕುಮಾರ್ ಬಾಬು, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ವೇಮಣ್ಣ, ಜಿಲ್ಲಾ ಉದ್ಯೋಗಾಧಿಕಾರಿ ರವೀಂದ್ರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಪದವಿ, ಐಟಿಐ, ಜಿಟಿಟಿಸಿ, ಇಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರು ಇದ್ದರು.

# ಜೀತ ಪದ್ಧತಿ ನಿರ್ಮೂಲನೆ ದಿನಾಚರಣೆ

## ಜೀತ ನಿರ್ಮೂಲನೆಗೆ ಸರ್ಕಾರದ ಯೋಜನೆಗಳ ಸಹಾಯ: ನ್ಯಾ.ಮಹಾವೀರ ಮ.ಕರೆಣ್ಣವರ



» ದಾವಣಗೆರೆ

ಸರ್ಕಾರದ ಯೋಜನೆಗಳಿಂದ ಬಡವರೂ ಸಹ ಬದುಕನ್ನು ಕಟ್ಟಿಕೊಂಡಿದ್ದು ಜೀತ ಪದ್ಧತಿ ನಿರ್ಮೂಲನೆಗೂ ಸಹಕಾರಿಯಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ.ಕರೆಣ್ಣವರ ತಿಳಿಸಿದರು.

ಅವರು ಗುರುವಾರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪಂಚಾಯತ್, ಪೊಲೀಸ್ ಇಲಾಖೆ, ಕಾರ್ಮಿಕ ಇಲಾಖೆ, ಹಾಗೂ ಕರ್ನಾಟಕ ಮುಕ್ತಿ ಅಲಯನ್ಸ್ ಸಹಯೋಗದಲ್ಲಿ ಜೀತ ಪದ್ಧತಿ ನಿರ್ಮೂಲನಾ ದಿನಾಚರಣೆ ಅಂಗವಾಗಿ ಏರ್ಪಡಿಸಲಾದ ಜಾಗೃತಿ ಜಾಥಾ ಹಾಗೂ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು.

ಹಿಂದಿನ ದಿನಮಾನದಲ್ಲಿ ಶ್ರೀಮಂತರಿಂದ ಹಣ ಪಡೆದು ಹಣ ತೀರುವಳಿಗೆ ಕೆಲಸ ಮಾಡುವ ಪದ್ಧತಿ ಇತ್ತು, ಅದರೆ ಈಗ ಕಾಲ ಬದಲಾಗಿದೆ. ಇದಕ್ಕೆ ಸರ್ಕಾರದ ಕಲ್ಯಾಣ ಕಾರ್ಯಕ್ರಮಗಳಿಂದ ಬಡವರು ಉತ್ತಮ ಬದುಕನ್ನು ಕಟ್ಟಿಕೊಳ್ಳುವಂತಾಗಿದೆ. ಕಾರ್ಮಿಕ ಇಲಾಖೆಯಿಂದ ಕಾರ್ಮಿಕ ಗುರುತಿನ ಚೀಟಿ, ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಪ್ರೋತ್ಸಹ ಧನ, ಉಚಿತ ಆರೋಗ್ಯ ವಿಮೆ, ಮುಂತಾದ ಸೌಲಭ್ಯಗಳನ್ನು ಜನರು ಬಳಸಿಕೊಳ್ಳುವ ಮೂಲಕ ಇನ್ನೊಬ್ಬರ ಮೇಲೆ ಅವಲಂಬನೆಯಾಗದೇ ಕಾನೂನಿನ ಚೌಕಟ್ಟಿನಲ್ಲಿ ವಿವಿಧ ಇಲಾಖೆಯಲ್ಲಿ ಸಿಗುವ ಸೌಲಭ್ಯಗಳನ್ನು ಬಳಸಿಕೊಂಡು ಸಂಪೂರ್ಣವಾಗಿ ಜೀತ ಪದ್ಧತಿ ನಿರ್ಮೂಲನೆ ಮಾಡಬೇಕಾಗಿದೆ ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಸುರೇಶ್.ಬಿ.ಇಟ್ನಾಳ್ ಮಾತನಾಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಜೀತ ಪದ್ಧತಿ ಕಂಡು ಬಂದಿರುವುದಿಲ್ಲ. ಜೀತ ಕಾರ್ಮಿಕರು ಕಂಡು ಬಂದರೆ ಅವರಿಗೆ ವಸತಿ ಕಲ್ಪಿಸುವುದು, ಸ್ವ ಉದ್ಯೋಗಕ್ಕಾಗಿ ಕೌಶಲ್ಯ ತರಬೇತಿ, ವಿದ್ಯಾಭ್ಯಾಸ, ಉದ್ಯೋಗ ಹಾಗೂ ಬ್ಯಾಂಕ್‌ಗಳಲ್ಲಿ ಸಾಲ ನೀಡುವ ಮೂಲಕ ಅವರನ್ನು ಆರ್ಥಿಕವಾಗಿ ಸದೃಢರನ್ನಾಗಿ ಮಾಡಲು ಗ್ರಾಮ ಪಂಚಾಯಿತಿ ಹಾಗೂ ವಿವಿಧ ಇಲಾಖೆಗಳ ಮೂಲಕ ಕಾರ್ಯಕ್ರಮಗಳ ಅನುಷ್ಠಾನ ಮಾಡಲಾಗುತ್ತಿದೆ ಎಂದರು.

ಜಿಲ್ಲೆಯಲ್ಲಿ ಜೀತ ಪದ್ಧತಿ ನಿರ್ಮೂಲನಾ ಸಮಿತಿ ರಚನೆ ಮಾಡಲಾಗಿದೆ, ಜಿಲ್ಲಾ ಮಟ್ಟದ ಸಮಿತಿಯಲ್ಲಿ ನ್ಯಾಯಾಧೀಶರು ಅಧ್ಯಕ್ಷರಾಗಿರುತ್ತಾರೆ. ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯಿತಿ ಸಿಇಒ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳನ್ನೊಳಗೊಂಡ ಸಮಿತಿ ರಚಿಸಲಾಗಿದೆ. ಈ ಸಮಿತಿಯು ಜೀತಪದ್ಧತಿ ಕುರಿತು ಬರುವ ದೂರುಗಳನ್ನು ಪರಿಶೀಲಿಸಿ ಅಗತ್ಯ ಕ್ರಮವನ್ನು ತೆಗೆದುಕೊಂಡು ಜಿಲ್ಲೆಯಲ್ಲಿ ಜೀತ ಪದ್ಧತಿ ಸಂಪೂರ್ಣ ನಿರ್ಮೂಲನೆಗೆ ಕ್ರಮ ಕೈಗೊಳ್ಳಲಾಗಿದೆ ಎಂದರು.

ವಕೀಲ ಸಂಘದ ಅಧ್ಯಕ್ಷರಾದ ಎಲ್.ಹೆಚ್ ಅರುಣಕುಮಾರ್, ಹೆಚ್ಚುವರಿ ರಕ್ಷಣಾಧಿಕಾರಿ ಮಂಜುನಾಥ್, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಕೃಷ್ಣನಾಯ್ಕ, ಉಪವಿಭಾಗಾಧಿಕಾರಿ ಸಂತೋಷ್ ಪಾಟೀಲ್, ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ಮಲ್ಲನಾಯ್ಕ ಬಿ, ಯೋಜನಾ ನಿರ್ದೇಕರಾದ ರೇಷ್ಮ ಕೌಸರ್, ಮುಕ್ತಿ ಅಲಯನ್ಸ್ ಸಂಚಾಲಕರಾದ ಬೃಂದಾ ಅಡಿಗ, ಕ್ರೀಸ್ಟೋಫರ್ ಸ್ವಾನಿ, ರಾಜೇಂದ್ರನ್ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ಭಾಗವಹಿಸಿದ್ದರು.

## ವಕ್ಫ್ ಮಂಡಳಿ ಮಾಜಿ ಚೇರ್ಮನ್ ವಿರುದ್ಧ ಅಪಪ್ರಚಾರ: ಪ್ರತಿಭಟನೆ




» ಚಿತ್ರದುರ್ಗ

ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಮಾಜಿ ಚೇರ್ಮನ್ ಹಾಲಿ ಸದಸ್ಯ ಕೆ.ಅನ್ವರ್‌ಬಾಷರವರ ಮೇಲೆ ಕೆಲವರು ವಿನಾ ಕಾರಣ ಅಕ್ರಮದ ಆಪಾದನೆ ಹೊರಿಸಿ ವಿವಿಧ ಇಲಾಖೆ ಅಧಿಕಾರಿಗಳಿಗೆ ದೂರು ನೀಡಿ ತೊಂದರೆ ಕೊಡುತ್ತಿರುವುದನ್ನು ವಿರೋಧಿಸಿ ಮುಸ್ಲಿಂ ಸಮಾಜದ ಕೆಲವು ಮುಖಂಡರುಗಳು ಹಾಗೂ ಮಸೀದಿಯ ಮುತುವಲ್ಲಿಗಳು ಬುಧವಾರ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿ ಅಪರ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದರು.

ಕೆ.ಅನ್ವರ್‌ಬಾಷರವರು ವಕ್ಫ್ ಮಂಡಳಿ ಜಾಗವನ್ನು ಕಬಳಿಸಿದ್ದಾರೆಂದು ಕೆಲವು ಪಟ್ಟಭದ್ರರು ರಾಜ್ಯ ಹಾಗೂ ಕೇಂದ್ರ ಸರ್ಕಾರದ ವಿವಿಧ ಇಲಾಖೆಗೆ ದೂರು ನೀಡಿ ಸಮಾಜದಲ್ಲಿರುವ ಅವರ ಗೌರವಕ್ಕೆ ಧಕ್ಕೆ ತರುತ್ತಿರುವುದನ್ನು ನೋಡಿದರೆ ಇದರ ಹಿಂದೆ ರಾಜಕೀಯ ಪಿತೂರಿಯಿರುವುದು ಮೇಲ್ನೋಟಕ್ಕೆ ಕಂಡು ಬರುತ್ತಿದೆ. ಕೆ.ಅನ್ವರ್‌ಬಾಷರವರು ವಕ್ಫ್ ಮಂಡಳಿ ಚೇರ್ಮನ್ ಆಗಿದ್ದಾಗ ಸರ್ಕಾರದ ವತಿಯಿಂದ ಪಿ.ಯು.ಕಾಲೇಜು ಮಂಜೂರಾತಿ ಮಾಡಿಸಿ ಶೈಕ್ಷಣಿಕವಾಗಿಯೂ ಸೇವೆ ಸಲ್ಲಿಸುತ್ತಿದ್ದಾರೆ. ಶಾದಿ ಮಹಲ್ ನಿರ್ಮಾಣ ಹಂತದಲ್ಲಿದೆ. ಸುಸಜ್ಜಿತ ವೆಂಟಿಲೇಟರ್ ಸಹಿತ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿಯೂ ಉಚಿತ ಅಂಬ್ಯುಲೆನ್ಸ್‌ಗಳ ಸೌಲಭ್ಯ ಒದಗಿಸಿದ್ದಾರೆ. ಮತ್ತೊಮ್ಮೆ ಇವರು ವಕ್ಫ್ ಮಂಡಳಿ ಚೇರ್ಮನ್ ಆಗುವುದನ್ನು ತಡೆಯುವುದಕ್ಕಾಗಿ ಇಂತಹ ಕೃತ್ಯಗಳನ್ನು ಎಸಗುತ್ತಿರುವವರ ಮೇಲೆ ಕಾನೂನು ರೀತಿಯ ಕ್ರಮ ಕೈಗೊಳ್ಳುವಂತೆ ಪ್ರತಿಭಟನಾಕಾರರು ಜಿಲ್ಲಾಡಳಿತವನ್ನು ಒತ್ತಾಯಿಸಿದರು.

ಹಾಜಿ ನಯಾಜ್, ಇಲಾಹಿ ಮುನ್ನ, ಸೈಫುಲ್ಲಾ, ಹನೀಸ್, ಸೈಯದ್ ಖುದ್ದೂಸ್, ಹಾಜಿ ಆರ್.ದಾದಾಪೀರ್, ಸೈಯದ್ ಇಸ್ಮಾಯಿಲ್, ವರದ ಹಜರತ್, ನೂರುಲ್ಲಾ ಹೆಚ್.ಪ್ಯಾರೆಜಾನ್, ಹಾಜಿ ಗೌಸ್‌ಪೀರ್, ಮುಹಿಬ್, ಬಾಷ, ನಜೀರ್, ಹುಸೇನ್‌ಪೀರ್, ಕೆ.ನಜೀರ್ ಅಹಮದ್ ಸೇರಿದಂತೆ ಜಿಲ್ಲೆಯ ಮಸೀದಿಯ ಮುತುವಲ್ಲಿಗಳು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ನಗರದ ವಿವಿಧ ಬಡಾವಣೆಗಳಲ್ಲಿ ಮಟ್ಕಾದಂದೆ : 3 ಪ್ರಕರಣ ದಾಖಲು



**ಚಳ್ಳಕೆರೆ:** ನಗರದ ವಿವಿಧೆಡೆ ನಿರಂತರ ದಾಳಿ ನಡೆಸಿ ಮೂರು ಮಟ್ಕಾ ಪ್ರಕರಣಗಳನ್ನು ಪತ್ತೆಹಚ್ಚುವಲ್ಲಿ ಪೊಲೀಸ್ ಇಲಾಖೆ ಯಶಸ್ವಿಯಾಗಿದ್ದು, ಮಟ್ಕಾಚೀಟಿ ಬರೆಯುವವರ ಮೇಲೆ ಪ್ರಕರಣ ದಾಖಲಿಸಿದ್ದಾರೆ.

ಸಾರ್ವಜನಿಕರ ಮಾಹಿತಿ ಮೇರೆಗೆ ಪೊಲೀಸ್ ಪೇದೆ ಕೆ.ಶಂಕರಣ್ಣ ಮತ್ತು ಸಿಬ್ಬಂದಿ ವರ್ಗ, ವೃತ್ತ ನಿರೀಕ್ಷಕ ಮಾರ್ಗದರ್ಶನದಲ್ಲಿ ಮದಕರಿನಗರದ ಕರೀಂ ಮನೆ ಮುಂದಿನ ಸಾರ್ವಜನಿಕ ರಸ್ತೆಯಲ್ಲಿ ಮಟ್ಕಾಚೀಟಿ ಬರೆಯುತ್ತಿದ್ದ ರಾಯದುರ್ಗದ ಮುಜಾಮಿಲ್(20) ಈತನನ್ನು ವಶಕ್ಕೆ ಪಡೆದು ಆತನನಿಂದ 1130 ವಶಪಡಿಸಿಕೊಂಡಿದ್ದಾರೆ.

ಮತ್ತೊಂದು ಪ್ರಕರಣದಲ್ಲಿ ಎಪಿಎಂಸಿ ಮಾರುಕಟ್ಟೆ ಬಳಿಯ ಸಾರ್ವಜನಿಕ ರಸ್ತೆಯಲ್ಲಿ ಮಟ್ಕಾಚೀಟಿಬರೆಯುತ್ತಿದ್ದ ಈರಣ್ಣ(75) ಈತನನ್ನು ವಶಕ್ಕೆ ಪಡೆದು ಮಟ್ಕಾಚೀಟಿಹಣ 850ವಶಪಡಿಸಿಕೊಂಡಿದ್ದಾರೆ. ಮದಕರಿ ನಗರದ ಸಾರ್ವಜನಿಕ ರಸ್ತೆಯಲ್ಲಿ ಮಟ್ಕಾಚೀಟಿ ಬರೆಯುತ್ತಿದ್ದ ನಿವಾಸಿ ಸಲೀಂ(53) ಆತನನ್ನು ವಶಕ್ಕೆ ಪಡೆದು 950 ಹಣ ವಶಪಡಿಸಿಕೊಂಡು ಪ್ರಕರಣ ದಾಖಲಿಸಿದ್ದಾರೆ. ಠಾಣಾಧಿಕಾರಿ ಎಎಸ್‌ಐ ರೇಣುಕಮ್ಮ ಮೂರು ಪ್ರಕರಣದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.

## ಮಾಹಿತಿ ಸರಿಪಡಿಸಿಕೊಳ್ಳಲು ಅವಕಾಶ

**ಚಳ್ಳಕೆರೆ:** ಪ್ರಧಾನಮಂತ್ರಿ ಫಸಲ್‌ಭೀಮಾ ಯೋಜನೆಯಡಿ 2023-24ನೇ ಸಾಲಿನ ಮುಂಗಾರು, ಹಿಂಗಾರು ಹಂಗಾಮುಗಳಲ್ಲಿ ಬೆಳೆಗಳ ದತ್ತಾಂಶವನ್ನು ದಾಖಲು ಮಾಡಿಕಳಿಸಿಕೊಟ್ಟಿದ್ದು, ಮುಂಗಾರಿಯಲ್ಲಿ 1293, ಹಿಂಗಾರಿನಲ್ಲಿ 35 ಪ್ರಸ್ತಾವನೆಗಳು ತಿರಸ್ಕೃತಗೊಂಡಿದ್ದು, ಆಕ್ಷೇಪಣೆಗಳನ್ನು ಸಲ್ಲಿಸಲು ಫೆ.15ರಿಂದ ಮಾರ್ಚ್2ರ ತನಕ ಅವಕಾಶವಿದೆ ಎಂದು ಸಹಾಯಕ ಕೃಷಿ ನಿರ್ದೇಶಕ ಜೆ.ಅಶೋಕ್ ತಿಳಿಸಿದ್ದಾರೆ.

**ಪ್ರಮುಖ ಸುದ್ದಿ**

# ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆಗೆ ಸಂವಾದ



» ಹೊಳಲ್ಕೆರೆ

ಸಂವಾದದ ಮೂಲಕ ಜ್ಞಾನವನ್ನು ಹೆಚ್ಚಿಸಿಕೊಂಡು ಪರೀಕ್ಷೆ ಭಯ ಹೋಗಲಾಡಿಸಿಕೊಳ್ಳುವಂತೆ ಶಾಸಕ ಡಾ.ಎಂ.ಚಂದ್ರಪ್ಪ ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ ಮೂಡಿಸಿದರು.

ಎಸ್.ಎಸ್.ಎಲ್.ಸಿ. ಪರೀಕ್ಷೆ ಫಲಿತಾಂಶ ಸುಧಾರಣೆಗಾಗಿ ಟಾಪ್ ಟೆನ್ ವಿದ್ಯಾರ್ಥಿಗಳಿಗೆ ಪರೀಕ್ಷಾ ಭಯ ನಿವಾರಿಸಲು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ, ಶಾಲಾ ಶಿಕ್ಷಣ ಇಲಾಖೆ ಸಹಯೋಗದೊಂದಿಗೆ ಪಟ್ಟಣದ ಸಂವಿಧಾನ ಸೌಧದಲ್ಲಿ ಗುರುವಾರ ಹಮ್ಮಿಕೊಳ್ಳಲಾಗಿದ್ದ ಸಂವಾದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಸಿನಿಮಾ, ನಾಟಕ, ಟಿ.ವಿ.ಧಾರವಾಹಿಗಳನ್ನು ನೋಡಿದ್ದು, ಹೇಗೆ ನಿಮ್ಮ ನೆನಪಿನಲ್ಲಿರುತ್ತದೋ ಅದೇ ರೀತಿ ಪರೀಕ್ಷೆಗಾಗಿ ಪಠ್ಯಪುಸ್ತಕಗಳನ್ನು ಓದಿದ ನೆನಪು ಮನದಲ್ಲಿ ಉಳಿಯಬೇಕಾದರೆ ಏಕಾಗ್ರತೆಯಿರಬೇಕು. ಶಿಕ್ಷಣಕ್ಕಾಗಿ ಸರ್ಕಾರ ಈಗ ಎಲ್ಲಾ ರೀತಿಯ ಅನುಕೂಲಗಳನ್ನು ಕಲ್ಪಿಸಿದೆ. ನಮ್ಮ ಕಾಲದಲ್ಲಿ ಓದುವಾಗ ಸಂವಾದ ಎನ್ನುವುದೆ ಇರಲಿಲ್ಲ. ಹತ್ತನೆ ತರಗತಿ ನಿಮ್ಮ ಜೀವನದ ಪ್ರಮುಖ ತಿರುವು. ಮುಂದೆ ವೈದ್ಯರು, ಇಂಜಿನಿಯರ್, ದೊಡ್ಡ ದೊಡ್ಡ ಅಧಿಕಾರಿಗಳಾಗಿ ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕೆಂದರೆ ಈಗಿನಿಂದಲೆ ಕಠಿಣ ಪರಿಶ್ರಮದಲ್ಲಿ ತೊಡಗಿಕೊಳ್ಳಿ ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ಸಂವಾದ ಎನ್ನುವುದು ಜ್ಞಾನ ಹೆಚ್ಚಿಸಿಕೊಳ್ಳಲು ಅತ್ಯುತ್ತಮವಾದ ಅವಕಾಶ. ನುರಿತ ಶಿಕ್ಷಕರುಗಳು ಬೋಧಿಸುವ ಪಾಠವನ್ನು ಗಮನ ಕೊಟ್ಟು ಕೇಳಿದಾಗ ಪರೀಕ್ಷೆಯಲ್ಲಿ ಹೆಚ್ಚಿನ ಅಂಕಗಳನ್ನು ಗಳಿಸಬಹುದು. ಹತ್ತನೆ ತರಗತಿ ಪರೀಕ್ಷೆಯಲ್ಲಿ 625 ಕ್ಕೆ 625 ಅಂಕಗಳನ್ನು ಪಡೆಯುವ ಪ್ರತಿ ವಿದ್ಯಾರ್ಥಿಗೆ ತಲಾ ಐವತ್ತು ಸಾವಿರ ರೂ.ಗಳ ಬಹುಮಾನ ನೀಡುವುದಾಗಿ ಶಾಸಕ ಡಾ.ಎಂ.ಚಂದ್ರಪ್ಪ ಘೋಷಿಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಶ್ರೀನಿವಾಸ್, ಪುರಸಭೆ ಅಧ್ಯಕ್ಷ ವಿಜಯಸಿಂಹ ಕಾಟ್ರೋತ್, ಉಪಾಧ್ಯಕ್ಷೆ ನಾಗರತ್ನ ವೇದಮೂರ್ತಿ, ಸರ್ಕಾರಿ ನೌಕರರ ಸಂಘದ ಗೌರವಾಧ್ಯಕ್ಷ ಲೋಕೇಶ್,ವೆಂಕಟೇಶ್,ಮೃತ್ಯುಂಜಯ, ಚಂದ್ರಣ್ಣ, ಗೋವಿಂದಪ್ಪ, ಪ್ರಶಾಂತ್, ಮಹಾಲಿಂಗಪ್ಪ,ರವಿಕುಮಾರ್,ಮೋಹನ್, ಸುರೇಂದ್ರನಾಥ್, ವಿಜಯಕುಮಾರ್ ಸೋಮಶೇಖರ್, ಬಸವರಾಜಪ್ಪ ಹಾಗೂ ವಿವಿಧ ಶಾಲೆಗಳ ಶಿಕ್ಷಕರುಗಳು, ವಿದ್ಯಾರ್ಥಿಗಳು ಸಂವಾದದಲ್ಲಿ ಪಾಲ್ಗೊಂಡಿದ್ದರು.

## ಫಾಸ್ಟ್ ನ್ಯೂಸ್

### ಮಾರ್ಚ್ 01, 02ರಂದು ಪಾತಲಿಂಗೇಶ್ವರ ಸ್ವಾಮಿ ಜಾತ್ರೆ



» **ಚಳ್ಳಕೆರೆ**

ತಾಲ್ಲೂಕಿನ ಪರಶುರಾಮಪುರ ಹೋಬಳಿಯ ಚನ್ನಮ್ಮನಾಗತಿಹಳ್ಳಿ ಗ್ರಾಮದಲ್ಲಿ ಪಾತಲಿಂಗೇಶ್ವರ ಸ್ವಾಮಿಯ ಜಾತ್ರಾ ಮಹೋತ್ಸವವನ್ನು ಮಾರ್ಚ್ 01 ಮತ್ತು 02 ಎರಡು ದಿನಗಳ ಕಾಲ ನಡೆಸಲಾಗುವುದು ಎಂದು ದೇವಸ್ಥಾನ ಸಮಿತಿ ಮುಖ್ಯಸ್ಥ ತಿಳಿಸಿದ್ದಾರೆ. ಪ್ರತಿವರ್ಷದಂತೆ ಈ ವರ್ಷವೂ ಸಹ ಶ್ರೀಪಾತಲಿಂಗೇಶ್ವರ ಸ್ವಾಮಿ ಜಾತ್ರೆಯಲ್ಲಿ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಬದಗಿಸುವಲ್ಲಿ ದೇವಸ್ಥಾನದ ಆಡಳಿತ ಮಂಡಳಿ ಸರ್ವಸಿದ್ದತೆಯನ್ನುನಡೆಸಿದೆ.ಮಾರ್ಚ್1ರಶನಿವಾರ ಚನ್ನಮ್ಮನಾಗತಿಹಳ್ಳಿ ಗ್ರಾಮದಿಂದ ದೇವರನ್ನು ವಿವಿಧ ಕಲಾತಂಡಗಳೊಂದಿಗೆ ಮೆರವಣಿಗೆ ಮೂಲಕ ದೇವಸ್ಥಾನಕ್ಕೆ ಕರೆತರಲಾಗುವುದು, 2ರ ಭಾನುವಾರ ಬೆಳಗ್ಗೆ 5 ಗಂಟೆಗೆ ರುದ್ರಾಭಿಷೇಕ, 10ಕ್ಕೆ ಮಹಾಮಂಗಳಾರತಿ, ತೀರ್ಥಪ್ರಸಾದ ವಿನಿಯೋಗ ಕಾರ್ಯಕ್ರಮ ನಡೆಯಲಿದೆ. ಗೊರವಿಕೆರೆ ವಂಶಸ್ಥರು ಮತ್ತು ಭಕ್ತರು ಸಕಾಲಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಸ್ವಾಮಿಯ ಮೆರವಣಿಗೆ ಹಾಗೂ ಪೂಜಾಕಾರ್ಯದಲ್ಲಿ ಪಾಲ್ಗೊಂಡು ಜಾತ್ರೆಯನ್ನು ಯಶಸ್ವಿಗೊಳಿಸಿಕೊಡಬೇಕೆಂದು ದೇವಸ್ಥಾನ ಆಡಳಿತ ಮಂಡಳಿ ಮನವಿ ಮಾಡಿದೆ. ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ ಕ್ಷೇತ್ರದ ಶಾಸಕ ಟಿ.ರಘುಮೂರ್ತಿ, ಪರಶುರಾಮಪುರ ಮಾಜಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಟಿ.ಆರ್.ಕಿರಣ್‌ಶಂಕರ್ ಮತ್ತು ಗೊರವಿನಕೆರೆ ವಂಶಸ್ಥರು ಹಾಗೂ ಭಕ್ತರು ಜಾತ್ರಾ ಕಾರ್ಯಕ್ರಮದಲ್ಲಿ ಭಾಗವಹಿಸಲು ಮನವಿ ಮಾಡಲಾಗಿದೆ.

### ರೈತರ ಪರ ನಾವಿರುತ್ತೇವೆ ಎಂಬ ಆತ್ಮಸ್ಥೈರ್ಯ ತುಂಬಲು ಸುಜ್ಞಾನ ಸಂಗಮ ಆಯೋಜನೆ



» **ಹೊಸದುರ್ಗ**

ನಿಮ್ಮ ದುಶ್ಚಟ.ದುರಭ್ಯಾಸ. ರಾಗ ದ್ವೇಷ ದುರ್ಗುಣಗಳನ್ನು ನಮ್ಮ ಜೋಳಗಿಗೆ ಹಾಕಬೇಕು, ಅವಿಭಕ್ತ ಕುಟುಂಬಗಳು ಭಾಗ ಆಗಿ ಒಂದು ಎಕರೆ ಎರಡು ಎಕರೆ ಜಮೀನು ಇರುವ ಕಾರಣ ದುಡಿದ ದುಡ್ಡನ್ನು ವ್ಯಯ ಮಾಡದೆ ಮಕ್ಕಳ ಶಿಕ್ಷಣಕ್ಕೆ ಮುಂದಿನ ಭವಿಷ್ಯಕ್ಕೆ ಕೂಡಿಟ್ಟು ಉತ್ತಮ ಸಂಸ್ಕಾರವಿತ ಜೀವನ ನಡೆಸುವುದು ಅತ್ಯವಶ್ಯಕ ಎಂದು ಕುಂಚಿಟಿಗ ಮಹಾ ಸಂಸ್ಥಾನ ಮಠದ ಶ್ರೀ ಶಾಂತವೀರ ಸ್ವಾಮೀಜಿ ಕಿವಿ ಮತು ಹೇಳಿದರು.

ತಾಲೂಕಿನ ಎಸ್.ನೇರಲಕೆರೆ ಗ್ರಾಮದಲ್ಲಿ ಆಯೋಜಿಸಿದ್ದ ಸುಜ್ಞಾನ ಸಂಗಮ ಸಮಾರಂಭದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದ ಶ್ರೀಗಳು ಬಡವರ.ರೈತರ ಪರ ನಾವಿರುತ್ತೇವೆ ಎಂಬ ಆತ್ಮಸ್ಥೈರ್ಯ ತುಂಬಲು ಹಳ್ಳಿಗಳಲ್ಲಿ ಸುಜ್ಞಾನ ಸಂಗಮ ಆಯೋಜನೆ ಮಾಡಲಾಗಿದೆಗ್ರಾಮಕ್ಕೆ ಒಂದು ದೇವಸ್ಥಾನ ವಿರಬೇಕು ಕೇರಿಗೊಂದು ಜಾತಿಗೊಂದು ಕುಲಕೊಂದು ದೇವರಾದರೆ ಮುಂದೆ ಪೂಜಿಸುವವರಾರು ಎಷ್ಟೋ ದೇವಸ್ಥಾನಗಳು ಪೂಜಾರಿಗಳಿಲ್ಲದೆ ವೃದ್ಧರು ಪೂಜೆ ಮಾಡುವ ಸ್ಥಿತಿ ನಿರ್ಮಾಣವಾಗಿದೆ ಎಂಬ ವಿಷಾದ ವ್ಯಕ್ತಪಡಿಸಿದರು. ಇದೇ ಸಂಧರ್ಬದಲ್ಲಿ ವಿಶ್ರಾಂತ ನ್ಯಾಯಮೂರ್ತಿ ಎಚ್. ಬಿಲ್ಲಪ್ಪ ಹಾಗೂ ಮಹಿಳಾ ಸಾಧಕಿಯರನ್ನ ಸನ್ಮಾನಿಸಿ ಗೌರವಿಸಲಾಯಿತು.

# 60ನೇ ವಯಸ್ಸಲ್ಲಿ ಎಂಎ ಎಕನಾಮಿಕ್ಸ್ ಪದವಿ ಪಡೆದ ಸರಸೋತಿ ಬಾಯಿ!



ಇಂದಿಗೂ ಮನೆಯಲ್ಲಿ ಶಾಲೆಯಲ್ಲಿ ಮಕ್ಕಳನ್ನು ಪುಸ್ತಕಗಳ ಪಾಠಗಳ ಓದು ಓದು ಓದು ಎಂದು ಹುರಿದುಂಬಿಸುತ್ತೇವೆ. ಹಲವೊಮ್ಮೆ ಬಲವಂತಪಡಿಸುತ್ತೇವೆ. ಓದು ಬರಹ ಲೆಕ್ಕಗಳ ಮನನಕ್ಕಾಗಿ ಶೈಶವ ಬಾಲ್ಯ ಪ್ರೌಢ ವಯಸ್ಸದು ಕಳೆದುಹೋಗುವುದು. ಬಾಲ್ಯವೆಂಬುದೆ ಇಂದಿನ ಮಕ್ಕಳಿಗೆ ಶಾಲೆ ಕಾಲೇಜಿನ ಪಠ್ಯ ವಿಷಯಗಳ ವಿದ್ಯಾಭ್ಯಾಸದಿ ಮಾಯವಾಗುತ್ತದೆ. ಮನೋಲ್ಲಾಸಕ್ಕೆ ದೈಹಿಕ ಚಟುವಟಿಕೆಗಳಿಗೆ ಆಟಗಳೆಂದರೆ ಅದು ಕೆಲವೇ ಕೆಲವು ಕ್ರಿಕೆಟ್ಟು ವಾಲುಬಾಲು ಅಷ್ಟೆ. ಆಡಿದರೆ ಖೋಖೋ ಕಬಡ್ಡಿ ಇಲ್ಲಾಂದರೆ ಅವು ಇಲ್ಲ. ಕೆಲ ಆಸಕ್ತರಿಗೆ ಕೇರಂ ಚದುರಂಗ ಉಂಟು ಆಡುವವರಿಗೆ ರನ್ನಿಂಗ್ ಜಂಪಿಂಗ್ ರಿಲೇ. ಇನ್ನು ಮರಕೋತಿ ಚಿಣ್ಣಿದಾಂಡು ಚರಾಪಟ ಕುಂಟಾಬಿಲ್ಲೆ ಅಳಗುಣಿಮಣಿ ಚೌಕಾಬಾರ ಇನ್ನಿತರ ಗೆಳೆಯಗೆಳತಿಯರೆಲ್ಲ ಸೇರಿ ಆಡುವ ಸಂತಸದ ಆಟಗಳೇ ಇಂದಿಲ್ಲದಂತಾಗಿವೆ. ಇವೆಲ್ಲ ಇಂದಿನವರಿಗೆ ಯಾವುದೊ ಅಂದಕಾಲತ್ತಿನ ಆಟಗಳು ನಮ್ಮವಲ್ಲ ಅನ್ನುವಂತಾಗಿದೆ.

ಓದು ಎನ್ನುವುದು ಪ್ರಪಂಚದಲ್ಲಿಯೇ ಅತ್ಯಂತ ಸುಲಭದ ಕೆಲಸ ಎಂಬ ಮಾತೊಂದಿದೆ. ಆದರೆ ಪೋಷಕರು ಶಿಕ್ಷಕರಾದಿಯಾಗಿ ಅದನ್ನು ಕಷ್ಟದ ಕೆಲಸವಾಗಿ ವರ್ಷದ ಎಲ್ಲಾ ದಿನಗಳು ಬುಕ್ಕಿನ ಹುಳುವಾಗಿ ಮಾರ್ಪಡಿಸಿದ್ದೇವೆ. ಅಂಕಗಳ ಗಳಿಕೆಯೊಂದೆ ವಿದ್ಯಾಭ್ಯಾಸದ ಧ್ಯೇಯೋದ್ದೇಶವಾಗಿ ಪರಿಗಣಿಸಿದ್ದೇವೆ. ಓದು ನೌಕರಿಗಾಗಿಯೇ ಎಂಬಂತಾಗಿದೆ. ಜೀವನದ ವಿವಿಧ ಕೌಶಲಗಳ ಗಳಿಕೆಗೆ ಗಮನವೇ ಇರದಂತಾಗಿದೆ. ಇಂದು ಸಾಕಷ್ಟು ಓದಿಯೇ ಯಾವುದೇ ಜೀವನಾವಶ್ಯಕ ಕೆಲಸಗಳು ದೊರೆಯದೆ ಪದವಿ ಪಡೆದದ್ದೇ ಹೆಚ್ಚೆಂಬಂತೆ ವ್ಯರ್ಥವಾಗಿ ತಂದೆತಾಯಿಗಳ ಹಣದಲ್ಲಿ ಶೋಕಿ ಮಾಡುವ ಯುವಕಪಡೆಯನ್ನು ನೋಡುವಂತಾಗಿದೆ.

ಇಂತಹ ಈ ಸಂಕ್ರಮಣ ಕಾಲದಲ್ಲಿ ಇಲ್ಲೊಬ್ಬ ಮಹಾತಾಯಿ ವಯಸ್ಸು ಅರವತ್ತಾದ ನಂತರ ಓದಬೇಕೆಂಬ ಆಸಕ್ತಿ ಬೆಳೆಸಿಕೊಂಡು ಇಂದು ಅರ್ಥಶಾಸ್ತ್ರದಲ್ಲಿ ಸ್ನಾತಕೋತ್ತರ ಪದವಿ ಪಡೆದಿದ್ದಾರೆ. ಈ ತಾಯಿ ಮಹಾರಾಷ್ಟ್ರದ ವಸಾಯಿಯ ಸರಸೋತಿಬಾಯಿ. ಇವರು ಅನುಕೂಲಸ್ಥ ಕುಟುಂಬದ ಹಿನ್ನೆಲೆಯವರಲ್ಲ. ಚೂರು ಪಾರು ಆಸ್ತಿ ಮನೆ ಹೊಲದ ಹುಟ್ಟುವಳಿ ಇರುವವರು ಅಲ್ಲವೇ ಅಲ್ಲ. ಪತಿದೇವರೇನಾದರು ಸಹಾಯ ಮಾಡಿ ಓದಲು ನೆರವು ನೀಡುತ್ತಿದ್ದಾರೆಂದರೆ ಅದೂ ಇಲ್ಲವೇ ಅಲ್ಲ. ಮನೆ ಮನೆಯ ಪಾತ್ರೆ ಬಟ್ಟೆ ತೊಳೆದು ಕೂಲಿ ಪಡೆದು ಜೀವನ ನಡೆಸುವಂತಾಕೆ. ಇವರೇ ಸರಸೋತಿಬಾಯಿ. ತಾನು ಓದು ಅರ್ಧಕ್ಕೆ ಮೊಟಕುಗೊಳಿಸಿದರು ಮನೆ ಕೆಲಸ ಮಾಡುತ್ತ ಜೀವನ ಮುನ್ನಡೆಸಿದಾಕೆ.

ತನ್ನ ಬಾಲ್ಯದಿ ಎಂಟನೇ ತರಗತಿ ಕಡೆ ಹೋಗಿದ್ದೆ ಕೊನೆ ಮನೆಯ ಕಷ್ಟ ಹೊಟ್ಟೆ ಹೊರೆಯುವ ತಾಪತ್ರಯಗಳ ನಡುವೆ ಓದು ಮುಂದೆ ಸಾಗಲಿಲ್ಲ. ತಂದೆ ಮಾರುಕಟ್ಟೆ ಕೂಲಿಯಲ್ಲಿ ತಾಯಿಯ ಮನೆಮನೆಗೆಲಸದಿ ಬದುಕಿನ ಬಂಡಿ ಸಾಗುತ್ತಿತ್ತು. ತಾಯಿಯ ಅಕಾಲಿಕ ಅಗಲಿಕೆ ಮನೆಯ ನಿಭಾಯಿಸುವ ಹೊಣೆಗಾರಿಕೆ ಹೆಚ್ಚು ಮಾಡಿತು. ಮುಂದೆ ಮದುವೆ ಓದಿಗೆ ತಡೆಯಾಯಿತು. ಅನಿವಾರ್ಯವಾಗಿ ತಾನು ನಾಕಾರು ಮನೆಗಳ ಚಾಕರಿ ಮಾಡುತ್ತ ಜೀವನ ನಿರ್ವಹಿಸುವ ಛಲ ತೊಟ್ಟಳು. ಇದು ಹೀಗೆ ಸಾಗುತ್ತ ಇಂದಿಗೆ ಇಪ್ಪತ್ತೈದು ವರ್ಷವಾಯಿತು.

ಮನೆಯ ಕೆಲಸಕ್ಕೆ ಹೋದಾಗ ತನ್ನ ಕೆಲಸ ಮುಗಿದ ನಂತರ ಬಿಡುವಲ್ಲಿ ಆ ಮನೆಯಲ್ಲಿನ ಪೇಪರ್ ನೋಡಲು ಶುರುಮಾಡಿದಳು. ಹೇಗೋ ಬಾಲ್ಯದಿ ಮಾಧ್ಯಮಿಕ ಶಾಲಾ ಹಂತದವರೆಗೆ ಓದಿದ ಅನುಭವ ಇತ್ತಲ್ಲ. ಅಕ್ಷರ ಜ್ಞಾನ ಓದಿನ ಕೌಶಲ ಬಂದಿತ್ತು. ಹೀಗೆ ಪತ್ರಿಕೆ ನೋಡುತ್ತ ನಿಧಾನ ನಿಧಾನ ಪತ್ರಿಕೆ ಶೀರ್ಷಿಕೆಗಳ ಓದುತ್ತ ವಿಷಯಗಳ ಓದುವ ರೂಢಿ ಮಾಡಿಕೊಂಡಳು. ವರ್ಷಗಳ ನಂತರ ಇಡೀ ಪತ್ರಿಕೆ ಓದುವ ವಿವಿಧ ಪುರವಣಿಗಳ ಓದುವ ಅದರ ಕುರಿತು ಮನನ ಮಾಡಿಕೊಳ್ಳುವ ವಿಚಾರವಂತಿಕೆ ಬಂದಿತು. ಮುಂದೆ ತನ್ನ ಗಂಡನ ಅಕಾಲಿಕ ಮರಣ ಮಕ್ಕಳಿಲ್ಲದ ಜೀವನ ಏಕತಾನತೆಯ ಹೋಗಲಾಡಿಸಲು ದುಃಖ ಮರೆಯಲು ಓದು ಸಂಗಾತಿಯಾಯಿತು. ಓದೇ ಜೀವನವಾಯಿತು. ಸರಸೋತಿಯ ಹೆಸರಿಗೆ ತಕ್ಕಂತೆ ವಿದ್ಯಾವಂತೆ ವಿದ್ಯಾಮಾತೆಯಾಗಿಸಿತು.

ಆರಂಭದಲ್ಲೇ ಈ ತಾಯಿಯ ಪತ್ರಿಕೆ ಓದುವ ಅಭಿರುಚಿಕಂಡಕೆಲಸದಮನೆಯಯಜಮಾನರು ತಾಯಿಯ ಓದಿನ ಅಸಕ್ತಿಯ ಹಿನ್ನೆಲೆ ಅರಿತರು. ಓಪನ್ ಸ್ಕೂಲ್ ಮೂಲಕ ಹತ್ತನೇ ತರಗತಿ ಮತ್ತು ಪಿಯುಸಿ ತೇರ್ಗಡೆಯಾಗಲು ಅಗತ್ಯ ನೆರವು ನೀಡಿದರು. ದಿನ ವರ್ಷ ಕಳೆಯುತ್ತಲೇ ನೋಡು ನೋಡುತ್ತಲೇ ತಾಯಿ ಪದವಿ ಪೂರೈಸಿದಳು. ತನ್ನ ಓದಿನ ಜ್ಞಾನದ ಹಸಿವನ್ನು ನೀಗಿಸಿಕೊಳ್ಳಲು ಸರಸೋತಿ ಬಾಯಿ ವಸಾಯಿಯಲ್ಲಿ ತಾನು ಮನೆಗೆಲಸ ಮಾಡುವ ಗಲ್ಲಿಯ ಗ್ರಂಥಾಲಯಕ್ಕು ಹೋಗುತ್ತಾಳೆ. ಅಲ್ಲಿ ತನ್ನಿಷ್ಟದ ಅರ್ಥಶಾಸ್ತ್ರದ ಪುಸ್ತಕಗಳನ್ನು ಹುಡುಕಿ ಓದತೊಡಗುತ್ತಾಳೆ.

ನಮ್ಮ ಸುತ್ತಮುತ್ತಲ ಅಕ್ಷರಸ್ಥರಿಗೆ ತಮಗೆ ಇಷ್ಟದ ವಿಷಯ ಕೇಳಿದರೆ ಬಹುತೇಕರು ತಡವರಿಸುತ್ತಾರೆ. ಶಾಲಾ ವಿದ್ಯಾರ್ಥಿಗಳೆ ಪರವಾಗಿಲ್ಲ ತಮಗಿಷ್ಟ ಕನ್ನಡವೊ ಇಂಗ್ಲೀಷೋ ವಿಜ್ಞಾನ ಗಣಿತ ಸಮಾಜವೆಂದೋ ಹೇಳುವರು. ದೊಡ್ಡವರಲ್ಲೇ ಗೊಂದಲ ಯಾಕೆಂದರೆ ಅವರು ಕಾಲೇಜಿನಲ್ಲಿ ಪರೀಕ್ಷೆಗಾಗಿ ಮಾತ್ರ ಓದಿರುತ್ತಾರೆ. ನೌಕರಿ ಗಳಿಕೆಯೊಂದೆ ಗುರಿಯಾಗಿರುತ್ತೆ. ಆದರೆ ಓದು ನಿತ್ಯ ಜೀವನಕ್ಕೆ ಬಳಕೆಗಾಗಿ ಎಂದು ಅರಿವು ಮೂಡಬೇಕು. ಯಾವುದೇ ವಿಷಯವು ಸಹ ವ್ಯರ್ಥವಲ್ಲ. ಸರಸೋತಿಬಾಯಿಗೆ ತನ್ನ ಬಡತನದ ಜೀವನದಿಂದ ಮೇಲೆ ಬರಲು ಲೆಕ್ಕಾಚಾರ ಬೇಕಿತ್ತು. ಅರವತ್ತರ ವಯಸ್ಸಲ್ಲಿ ಓದಿ ನೌಕರಿ ಸಿಗಲಾರದೆಂದು ಗೊತ್ತಿದೆ. ಆದರೆ ಜ್ಞಾನ ಗಳಿಸಿದರೆ ಸ್ವಂತ ದುಡಿಮೆ ಮಾಡಲು ನೆರವಾಗುತ್ತದೆ. ಓಣಿಯ ವಿದ್ಯಾರ್ಥಿಗಳಿಗೆ ರಾತ್ರಿ ಪಾಠ ಮಾಡಬಹುದು. ಖಾಸಗಿ ಶಾಲೆ ಕಾಲೇಜಿನಲ್ಲು ಅಧ್ಯಾಪಿಕೆಯಾಗಿ ಕೆಲಸ ಮಾಡಬಹುದು. ಸರಸೋತಿಯನ್ನೇ ಈ ವಿಚಾರವಾಗಿ ಕೇಳಿದರೆ " ಓದುವ ಆಸಕ್ತಿ ಇತ್ತು ಆದರೆ ಬಡತನ ಅಡ್ಡಿಯಾಯಿತು. ಈಗ ನನ್ನ ಓದುವ ಆಸೆ ಪೂರೈಸಿಕೊಳ್ಳುತ್ತಿರುವೆ. ಪದವಿ ಪಡೆದಿರುವೆ. ಎಕನಾಮಿಕ್ಸ ಓದಿದ ನಂತರ ಮನೆ ಕೆಲಸ ಮಾಡುವುದ ಬಿಟ್ಟು ಶಾಲೇಲಿ ಮಕ್ಕಳಿಗೆ ಕಲಿಸುವ ಕೆಲಸಕ್ಕೆ ಸೇರುವೆ" ಎಂದು ಹೇಳುವ ಸರಸೋತಿಯ ಆತ್ಮವಿಶ್ವಾಸ ಹರೆಯದ ಓದುಗರಿಗೆಲ್ಲ ಸ್ಪೂರ್ತಿಯಾಗುವಂತಿದೆ.

ಓದು ಬದುಕನ್ನು ಬದಲಾಯಿಸುತ್ತದೆ. ಓದಿದ ಬದುಕು ಇನ್ನಷ್ಟು ಓದುಗರಿಗೆ ಪ್ರೇರಣೆಯಾಗುತ್ತದೆ. ಓದು ಬರಹ ನಮ್ಮ ಕೌಟುಂಬಿಕ ಹಾಗು ಸಾಮಾಜಿಕ ಜೀವನದ ಗುಣಮಟ್ಟ ಹೆಚ್ಚಳ ಮಾಡುತ್ತದೆ. ಘನತೆ ಗೌರವ ತಂದುಕೊಡುತ್ತದೆ. ಇಂದಿಗು ಆಟೋ ಓಡಿಸುತ್ತ, ತರಕಾರಿ ಹಣ್ಣು ಹೂ ಮಾರುತ್ತ, ಕಿರಾಣಿ ಅಂಗಡಿಗಳಲ್ಲಿ ಕೆಲಸ ಮಾಡುತ್ತ, ಮಾಲ್ ಗಳಲ್ಲಿ ಸಹಾಯಕರಾಗಿ ದುಡಿಯುತ್ತ ಕುಟುಂಬದ ಜೀವನ ನಿರ್ವಹಿಸುತ್ತಾ ಓದುತ್ತಿರುವ ಮತ್ತು ಓದಿ ಸರ್ಕಾರದಲ್ಲಿಯೋ ಖಾಸಗಿಯಾಗಿಯೋ ನೌಕರಿ ಮಾಡುತ್ತ ಸುಭದ್ರ ಜೀವನ ಕಟ್ಟಿಕೊಂಡ ಸಾವಿರಾರು ಮಾತೆಯರ ನಾವು ನಮ್ಮ ಸುತ್ತಮುತ್ತಲೇ ಕಾಣುತ್ತೇವೆ. ಅದಕ್ಕೆ ಹಿರಿಯರು ಹೇಳಿದ್ದು ಕಲಿತ ನಾರಿ ದೇಶಕ್ಕೆ ಉಪಕಾರಿ. ಹೆಣ್ಣೊಂದು ಕಲಿತರೆ ಶಾಲೆಯೊಂದು ತೆರೆದಂತೆ. ಅಕ್ಷರವಂತ ಮಹಿಳೆ ಕುಟುಂಬದ ಪ್ರಗತಿಗೆ ದಾರಿ ಎಂದು. ಮಹಾರಾಷ್ಟ್ರದ ವಸಾಯಿಯ ಸರಸೋತಿಯ ಜೀವನ ಇನ್ನು ನಿಶ್ಚಿಂತವಾಗಿ ಸಾಗುತ್ತದೆ. ಆಕೆಯ ಬದುಕು ಸಾವಿರಾರು ಓದುಗರಿಗೆ ಸ್ಪೂರ್ತಿಯಾಗುತ್ತದೆ. ಸರಸೋತಿ ಹೆಸರಿಗೆ ಅನ್ವರ್ಥವಾಗಿ ಸರಸ್ವತಿಯೇ ಆದದ್ದು ಈ ಜಗದ ಬದುಕಿನ ಒಂದು ಅದ್ಭುತ!



» **ಡಾ.ಉಮೇಶ್ ಟಿ.ಪಿ.**
**ಸಾಹಿತಿಗಳು, ರಾಷ್ಟ್ರಪ್ರಶಸ್ತಿ ಪುರಸ್ಕೃತ ಶಿಕ್ಷಕರು ತುಪ್ಪದಹಳ್ಳಿ, ಹೊಳಲ್ಕೆರೆ**

**ಬಜೆಟ್ ಅಧಿವೇಶನದ ಚರ್ಚೆಯಲ್ಲಿ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್**

# ಕೇಂದ್ರ ಸರಕಾರದಿಂದ ರಾಜ್ಯಕ್ಕೆ ತ್ರೀಡಿ ನೀತಿ

» **ದಾವಣಗೆರೆ**

ದೇಶದಲ್ಲಿ ಅತಿ ಹೆಚ್ಚು ತೆರಿಗೆ ನೀಡುವ ರಾಜ್ಯಗಳಲ್ಲಿ ಒಂದಾದ ಕರ್ನಾಟಕಕ್ಕೆ ಕೇಂದ್ರ ಸರಕಾರದ ಬಜೆಟ್‌ನಲ್ಲಿ ದೊರೆತಿದ್ದು ಅತ್ಯಲ್ಪ, ಕೇಂದ್ರ ಸರಕಾರ ಕರ್ನಾಟಕದ ಮೇಲೆ '3 ಡಿ' (ಡಿಸ್ಕ್ರಿಮಿನಿಷೇನ್, ಡಿಲೇ ಮತ್ತು ಡಿನೈ)ನೀತಿ ಅನುಸರಿಸುತ್ತಿದೆ ಎಂದು ದಾವಣಗೆರೆ ಲೋಕಸಭೆ ಸದಸ್ಯ ಡಾ.ಪ್ರಭಾ ಮಲ್ಲಿಕಾರ್ಜುನ್ ಹೇಳಿದ್ದಾರೆ. ಕೇಂದ್ರ ಸರಕಾರದ ಬಜೆಟ್ ಅಧಿವೇಶನದ ಚರ್ಚೆಯಲ್ಲಿ ಪಾಲ್ಗೊಂಡ ಅವರು, ಆಯವ್ಯಯದಲ್ಲಿ ರಾಜ್ಯಕ್ಕೆ ಆದ ಅನ್ಯಾಯದ ಬಗ್ಗೆ ಮಾತನಾಡಿದರು.

ಕೇಂದ್ರ ಸರಕಾರ ಸಬ್ ಕಾ ಸಾಥ್ ಸಬ್ ಕಾ ವಿಕಾಸ್ ಎಂಬ ಭರವಸೆ ನೀಡಿದ್ದರು. ವಾಸ್ತವದಲ್ಲಿ ಇದು ಕೆಲವರ ಜತೆ ಕೆಲವರ ಸಾಥ್ ಅಭಿವೃದ್ಧಿ ಎನ್ನುವಂತಾಗಿದೆ. ಕೇಂದ್ರ ವಿತ್ತಸಚಿವರು ಮಧ್ಯಮವರ್ಗದಧ್ವನಿಯನ್ನು ಕೇಳಿದ್ದೇನೆ ಎಂದು ಹೇಳುತ್ತಾರೆ. ಆದರೆ 2023–24ನೇ ಹಣಕಾಸು ವರ್ಷದಲ್ಲಿ ಕೇವಲ 6.68% ಜನರು ಮಾತ್ರ ಆದಾಯ ತೆರಿಗೆ ಸಲ್ಲಿಸಿದ್ದಾರೆ. ಭಾರತದ ಜನಸಂಖ್ಯೆ 142 ಕೋಟಿ, ಹೀಗಿದ್ದಾಗ ಹಣಕಾಸು ಸಚಿವರು ಯಾವ ಮಧ್ಯಮವರ್ಗದ ಬಗ್ಗೆ ಮಾತನಾಡುತ್ತಿದ್ದಾರೆ? ದಿನಕ್ಕೆ 100ಕ್ಕೂ ಕಡಿಮೆ ಆದಾಯವಿರುವ ಬಡವರಿಗೆ ಏನಾದರೂ ಪರಿಹಾರವಿದೆಯಾ ಎಂದು ಸಂಸದರು ಪ್ರಶ್ನಿಸಿದ್ದಾರೆ. ಪದವೀಧರ ನಿರುದ್ಯೋಗದ ಪ್ರಮಾಣ ಶೇ.29.1 ಇದೆ. ಇದು ಇತ್ತೀಚಿನ ಇತಿಹಾಸದಲ್ಲೇ ಅತಿ ಹೆಚ್ಚು.2024ರ ಜೂನ್‌ನಲ್ಲಿ ನಿರುದ್ಯೋಗದ ಪ್ರಮಾಣ ಶೇ.9.2 ಏರಿಕೆಯಾಯಿತು. 2014ರಿಂದ ನೈಜ ವೇತನ ಕುಸಿದಿದೆ. ಕೃಷಿ ಕಾರ್ಮಿಕರ ವೇತನ ಕೇವಲ ಶೇ.0.8ರಷ್ಟು ಏರಿಕೆಯಾಗಿದೆ, ಅನೌಪಚಾರಿಕ ವಲಯದಲ್ಲಿ ಶೇ.0.2 ಮಾತ್ರ ಹಾಗೂ ಕಟ್ಟಡ ಕಾರ್ಮಿಕರಿಗೆ ಅತ್ಯಲ್ಪ ವೇತನವಿದೆ.

9.90 ಲಕ್ಷ ಕೋಟಿ ಸಾಲ ಮನ್ನಾ: ಕಳೆದ 5 ವರ್ಷಗಳಲ್ಲಿ ಸರಕಾರಿ ಬ್ಯಾಂಕ್‌ಗಳು ಶ್ರೀಮಂತರು ಪಡೆದಿರುವ 9.90 ಲಕ್ಷ ಕೋಟಿ ಸಾಲ ಮನ್ನಾ ಮಾಡಿದ್ದು, ಇದು ವಿಕಸಿತ ಭಾರತವೇ? ಇನ್ನು ಗೃಹ ಸಾಲ ಮತ್ತು ನಿರ್ವಹಣಾ ಸಾಲ ಪ್ರಮಾಣ ಜೆಡಿಪಿಯ ಶೇ.39ರಷ್ಟಿದೆ. ಜನಸಾಮಾನ್ಯರು ಸಾಲದಹೊರೆ ಹೊತ್ತಿದ್ದಾರೆ.

# ವಿದ್ಯಾರ್ಥಿಗಳ ಭವಿಷ್ಯದ ಬದುಕಿಗೆ ಶಿಕ್ಷಣವೇ ಆಧಾರ

» **ಚಳ್ಳಕೆರೆ**



ಶಾಲಾ ಹಂತದಲ್ಲಿ ವಿದ್ಯಾರ್ಥಿಗಳ ಬುದ್ಧಿಕೌಶಲ್ಯವನ್ನು ಹೆಚ್ಚಿಸಲು ಶಿಕ್ಷಣ ಇಲಾಖೆ ಕಲಿಕಾ ಹಬ್ಬದ ಮೂಲಕ ವಿಶೇಷ ಜಾಗೃತಿಯನ್ನುಂಟು ಮಾಡುತ್ತಿದೆ. ಕಲಿಕಾ ಹಬ್ಬ ವಿದ್ಯಾರ್ಥಿಗಳಿಗೆ ಉತ್ತಮ ಮಾರ್ಗವನ್ನು ಕಲ್ಪಿಸಬಹುದಾಗಿದೆ. ನುರಿತ ಶಿಕ್ಷಕರು ಕಲಿಕಾಹಬ್ಬವನ್ನು ಯಶಸ್ವಿಗೊಳಿಸಲು ಪ್ರಾಮಾಣಿಕ ಪ್ರಯತ್ನ ಮುಂದುವರೆಸಿದ್ದಾರೆ, ವಿದ್ಯಾರ್ಥಿಗಳೂ ಸಹ ಶಿಕ್ಷಣ ಇಲಾಖೆಯ ಗೌರವವನ್ನು ಎತ್ತಿಹಿಡಿಯಲು ಹೆಚ್ಚುಪರಿಶ್ರಮದಿಂದ ವಿದ್ಯಾಭ್ಯಾಸ ಮಾಡಬೇಕೆಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು.

ಅವರು, ಗಾಂಧಿನಗರದ ಸರ್ಕಾರಿ ಹಿರಿಯಪ್ರಾಥಮಿಕ ಶಾಲಾ ಆವರಣದಲ್ಲಿ ದಕ್ಷಿಣ ಕ್ಲಸ್ಟರ್‌ಮಟ್ಟದ ಎಫ್‌ಎಲ್‌ಎನ್ ಕಲಿಕಾಹಬ್ಬವನ್ನು ಗಿಡಕ್ಕೆನೀರು ಎರೆಯುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಚಳ್ಳಕೆರೆ ತಾಲ್ಲೂಕಿನಾದ್ಯಂತ ಶಿಕ್ಷಣ ಇಲಾಖೆ ಕಲಿಕಾಹಬ್ಬವನ್ನು ಎಲ್ಲಾ ಕ್ಲಸ್ಟರ್ ವಿಭಾಗದಲ್ಲಿ ಹಮ್ಮಿಕೊಂಡು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಲಾಗುತ್ತಿದೆ. ವಿದ್ಯಾರ್ಥಿಗಳೂ ಸಹ ಶಿಕ್ಷಕರುನೀಡುವ ಶಿಕ್ಷಣ ಬಗ್ಗೆ ಜಾಗೃತರಾಗಿರಬೇಕು ಶಿಕ್ಷಣ ಇಲಾಖೆ ಇಂದು ಅನೇಕ ಸಮಸ್ಯೆಗಳ ನಡುವೆಯೂ ವಿದ್ಯಾರ್ಥಿಗಳು ಬದುಕುಕಟ್ಟಿಕೊಳ್ಳಲು ಅನುಕೂಲವಾಗುವ ವ್ಯವಸ್ಥೆ ಮಾಡಲಾಗುತ್ತಿದೆ. ನೂತನ ತಾಂತ್ರಿಕತೆಯ ಶಿಕ್ಷಣದಿಂದ ವಿದ್ಯಾರ್ಥಿಗಳು ಇನ್ನೂ ಹೆಚ್ಚು ಪರಿಣಿತಿಪಡೆಯುವಂತಾಗುತ್ತದೆ ಎಂದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T